# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 122 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 23–11–2023 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 122 | Title- Code: KARKAN 28269 | Chitradurga | Date: 23-11-2023 Thursday | Page: 4 | Price: Rs. 2-00

ಒಳಪುಟದ ಸುದ್ದಿಗಳು
ನವಜಾತ ಶಿಶು ಹಾರೈಕೆ ಹಾಗೂ ಪೋಷಣೆಗೆ ಎಲ್ಲರ ಸಹಕಾರ ಅಗತ್ಯ 2
ಅಶೋಕ್ ನಮ್ಮನ್ನ ಭಸ್ಮ ಮಾಡುವ ಶಕ್ತಿ ಪಡೆದಿದ್ದಾರೆ: ಚೆಲುವರಾಯಸ್ವಾಮಿ ಲೇವಡಿ 3
ಬಸ್ ಟಯರ್ ಬರಸ್ಟ್ ಯುವತಿಯ ಎಡಗಾಲಿನ ಕಾಲು ಮೂಳೆ ಮುರಿತ 4

ಸುದ್ದಿ, ಜಾಹಿರಾತಿಗೆ 9686622252

# ಸರ್ಕಾರ ರಾಷ್ಟ್ರೀಕೃತ ಬದಲು ಠೇವಣಿ ಹಣ ಸಹಕಾರಿ ಬ್ಯಾಂಕುಗಳಲ್ಲಿಯೇ ತೊಡಗಿಸುವ ಬಗ್ಗೆ ಪರಿಶೀಲನೆ: ಸಿಎಂ

» **ವಿಜಯಪುರ**






ಸರ್ಕಾರ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಇಡುವ ಠೇವಣಿ ಹಣವನ್ನು ಸಹಕಾರಿ ಬ್ಯಾಂಕುಗಳಲ್ಲಿಯೇ ತೊಡಗಿಸುವ ಬಗ್ಗೆ ಪರಿಶೀಲನೆ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಅಖಿಲ ಬಾರತ ಸಹಕಾರಿ ಸಪ್ತಾಹದ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡುತ್ತಿದ್ದರು.

ಸಹಕಾರಿ ಬ್ಯಾಂಕುಗಳು ಸುಸ್ಥಿರವಾಗಿರ ಬೇಕು. ಸುಸ್ಥಿರವಾಗಿದ್ದರೇ ಮಾತ್ರ ಅವು ರೈತರಿಗೆ ಸಾಲ ನೀಡಲು ಸಾಧ್ಯ. ರೈತರಿಗೆ ವ್ಯವಸಾಯ ಮಾಡಲು ಸಕಾಲದಲ್ಲಿ ಸಾಲ ಸಿಕ್ಕರೆ ವ್ಯವಸಾಯ ಮಾಡಲು ಅನುಕೂಲವಾಗಿ ಉತ್ಪಾದನೆಯೂ ಹೆಚ್ಚಾಗಲಿದೆ ಎಂದರು. ಸರ್ಕಾರ ಒಂದು ವರ್ಷಕ್ಕೆ 1200 ಕೋಟಿ ರೂ.ಗಳನ್ನು ಹಾಲು ನೀಡು ಕ್ಷೀರ ಭಾಗ್ಯ ಕಾರ್ಯಕ್ರಮಕ್ಕೆ ಖರ್ಚು ಮಾಡುತ್ತಿದೆ. ಹಿಂದೆ ಮುಖ್ಯಮಂತ್ರಿಯಾಗಿದ್ದಾಗ ಸಹಕಾರ ಸಂಘಗಳಲ್ಲಿ ರೈತರು ಪಡೆದ ಸಾಲವನ್ನು ಮನ್ನಾ ಮಾಡಲು 50 ಸಾವಿರದವರಗೆ ಸಂಪೂರ್ಣ ಮನ್ನಾ ಮಾಡಲಾಯಿತು. ಹೀಗೆ ಮನ್ನಾ ಮಾಡದ್ದರಿಂದ ಸಹಕಾರಿ ಸಂಘಗಳು ಹಾಗೂ ಸಹಕಾರ ಬ್ಯಾಂಕುಗಳಿಗೆ ಶಕ್ತಿ ಬರಲು ಸಾಧ್ಯವಾಯಿತು ಎಂದರು.

**ರೈತರಿಗೆ ಸಾಲ ನೀಡಲು ನಬಾರ್ಡ್ ಹಾಗೂ ಪ್ರಧಾನಮಂತ್ರಿಗಳಿಗೆ ನವರಿಗೆ ಕೂಡಲೇ ಪತ್ರ:** ನಮ್ಮ ಸರ್ಕಾರ ಬಜೆಟ್ ಮಂಡಿಸಿದಾಗ ಜೀರೋ ಪರ್ಸೆಂಟ್ ಸಾಲವನ್ನು 3 ರಿಂದ 5 ಲಕ್ಷದವರೆಗೆ ಏರಿಸುವ ಕೆಲಸ ಮಾಡಿದ್ದೇವೆ. ರೈತರಿಗೆ ಸಾಲ ನೀಡಬೇಕೆಂದು ನಬಾರ್ಡ್ ಹಾಗೂ ಪ್ರಧಾನಮಂತ್ರಿಗಳಿಗೆ ನವರಿಗೆ ಕೂಡಲೇ ಪತ್ರ ಬರೆಯುವ ಕೆಲಸ ಮಾಡುವುದಾಗಿ ಭರವಸೆ ನೀಡಿದರು. ಹಿಂದೆ ತಾವು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿಯೇ 3 ಲಕ್ಷದವರೆಗೆ ಶೇ. 3 ರಷ್ಟು ಬಡ್ಡಿ ದರದಲ್ಲಿ ಸಾಲ ನೀಡಲಾಗುತ್ತಿತ್ತು. ಈಗ ಅದನ್ನು ಬಡ್ಡಿ ರಹಿತವಾಗಿ 3–5 ಲಕ್ಷದವರೆಗೆ ಸಾಲ ನೀಡುವ ಕೆಲಸ ಮಾಡಲಾಗಿದೆ. ಶೇ 3 ರಷ್ಟು ಬಡ್ಡಿಯನ್ನು 15 ಲಕ್ಷ ಆಗುವವರೆಗೆ ಮಾತ್ರ ನೀಡಬೇಕು.

**ನಿಸ್ವಾರ್ಥವಾಗಿ ಕೆಲಸ ಮಾಡಿದರೆ ಮಾತ್ರ ಬ್ಯಾಂಕುಗಳು ಲಾಭದಾಯಕವಾಗಿ ನಡೆಯುತ್ತವೆ:** ಯಾವುದೇ ಬ್ಯಾಂಕಿನಲ್ಲಿ ಎಲ್ಲರೂ ನಿಸ್ವಾರ್ಥವಾಗಿ ಕೆಲಸ ಮಾಡಿದರೆ ಮಾತ್ರ ಅದು ಲಾಭದಾಯಕವಾಗಿ ನಡೆಯುತ್ತದೆ. ಸ್ವಾರ್ಥ ಬಿಟ್ಟು ಸೇವೆ ಮಾಡುವ ಕ್ಷೇತ್ರವಿದು ಎಂದರು. ಆ ಕ್ಷೇತ್ರದಲ್ಲಿ ಕೆಲಸ ಮಾಡುವವರಿಗೆ ಒಳ್ಳೆಯ ನಾಯಕತ್ವ ಬೆಳೆಸಿಕೊಳ್ಳುವ ಅವಕಾಶ ದೊರಯುತ್ತದೆ. ವಿಜಯಪುರ ಡಿಸಿಸಿ ಬ್ಯಾಂಕ್ ಪ್ರಾರಂಭವಾಗಿ 105 ವರ್ಷಗಳಾಗಿರುವ ಸ್ಮರಣಾರ್ಥ 15–16 ಕೋಟಿ ವೆಚ್ಚದಲ್ಲಿ ಹೊಸ ಕಟ್ಟಡ ಕಟ್ಟಿರುವುದರ ಅರ್ಥ ಬ್ಯಾಂಕು ಆರ್ಥಿಕವಾಗಿ ಸುಸ್ಥಿರವಾಗಿರುವುದರ ದ್ಯೋತಕ ಎಂದರು.

ಸಹಕಾರಿ ತತ್ವದ ಮೇಲೆ ಜಾಗೃತಿ, ಸಮಾಜದಲ್ಲಿನ ಬಡ ಬಡತನ, ಅಸಮಾನತೆ ಹೋಗಲಾಡಿಸುವ ಪ್ರಯತ್ನ ಮಾಡಬೇಕು ನಮ್ಮ ಸರ್ಕಾರ ಅಸಮಾನತೆ ತೊಲಗಿಸಲು ಅನೇಕ ಕಾರ್ಯಕ್ರಮಗಳನ್ನು ಜಾರಿಗೆ ತಂದಿದ್ದೇವೆ. ಶಕ್ತಿ ಯೋಜನೆಯಡಿ 1 ಕೋಟಿ ಮಹಿಳೆಯರು ಉಚಿತವಾಗಿ ಬಸ್ಸುಗಳಲ್ಲಿ ಪ್ರಯಾಣ ಮಾಡಿದ್ದಾರೆ. ಸಣ್ಣ ಪುಟ್ಟ ದೋಷಗಳ ಹೊರತಾಗಿಯೂ ನೂರಕ್ಕೆ 90 ಭಾಗ ಬಡವರಿಗೆ, ಮಹಿಳೆಯರಿಗೆ, ದಲಿತರಿಗೆ, ಅಲ್ಪಸಂಖ್ಯಾತರಿಗೆ ಈ ಕಾರ್ಯಕ್ರಮ ರೂಪಿಸಿ ಆರ್ಥಿಕ ಶಕ್ತಿಯನ್ನು ತುಂಬಲಾಗಿದೆ. ಸಹಕಾರ ಕ್ಷೇತ್ರ ಹೇಗೆ ಜಾತಿ ಧರ್ಮಗಳಿಂದ ಹೊರತಾಗಿದೆಯೋ ಅದೇ ರೀತಿ ನಮ್ಮ ಕಾರ್ಯಕ್ರಮಗಳು ಎಲ್ಲಾ ಜಾರಿ ಧರ್ಮಗಳ ಜನರಿಗೆ, ಮೇಲ್ವರ್ಗದ ಬಡವರಿಗೂ ಕಾರ್ಯಕ್ರಮಗಳನ್ನು ಕೊಟ್ಟಿದ್ದೇವೆ.

**ಬರಗಾಲವನ್ನು ಸಮರ್ಥವಾಗಿ ನಿಭಾಯಿಸುತ್ತೇವೆ:** 12 ರಾಜ್ಯಗಳಲ್ಲಿ ಬರಗಾಲವಿದ್ದು, ಕರ್ನಾಟಕದಲ್ಲಿಯೂ ಕೂಡ 236 ತಾಲ್ಲೂಕುಗಳಲ್ಲಿ 223 ತಾಲ್ಲೂಕುಗಳಲ್ಲಿ ಬರ ಘೋಷಣೆ ಮಾಡಲಾಗಿದೆ. ಬರ ಪರಿಹಾರವನ್ನು ಕೇಂದ್ರ ಸರ್ಕಾರದಿಂದ ಬಿಡುಗಡೆ ಮಾಡಿಸುವ ಕೆಲಸವನ್ನು ನಮ್ಮ ಸಂಸದರು ಮಾಡಬೇಕು. ಕುಡಿಯುವ ನೀರಿಗೆ ಸಮಸ್ಯೆಯಾಗಬಾರದೆಂದ ಡಿಸಿ, ಸಿಇಓ ಗಳಿಗೆ ಸೂಚನೆ ನೀಡಲಾಗಿದ್ದು, ಜಿಲ್ಲಾಧಿಕಾರಿಗಳ ಬಳಿ 800 ಕೋಟಿ ರೂ. ಗಳು ಲಭ್ಯವಿದೆ. ಮೇವಿಗೆ, ಉದ್ಯೋಗ ನೀಡಲು, ಕುಡಿಯುವ ನೀರಿಗೆ ರಾಜ್ಯ ಸರ್ಕಾರ ಈಗಾಗಲೇ 800 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿದೆ. ಬರಗಾಲವನ್ನು ನಮ್ಮ ಸರ್ಕಾರ ಸಮರ್ಥವಾಗಿ ನಿಭಾಯಿಸುತ್ತದೆ ಎಂದು ಬರವಸೆ ನೀಡಿದರು.

**ಸಹಕಾರಿ ರಂಗ ಜಾತಿ ಧರ್ಮರಹಿತ ಕ್ಷೇತ್ರ:** ಸ್ವಾತಂತ್ರ್ಯಪೂರ್ವದಿಂದಲೂ ಸಹಕಾರಿ ಕ್ಷೇತ್ರ ಬೆಳೆಯುತ್ತಾ ಬಂದಿದೆ. ಸಿದ್ದನಗೌಡ ಸಣ್ಣರಾಮನಗೌಡ ಪಾಟೀಲರು ಸಹಕಾರ ಸಂಘ ಪ್ರಾರಂಭಿಸಿದರು, ಇಂದು ರಾಜ್ಯದಲ್ಲಿ 45600 ಸಹಕಾರ ಸಂಘಗಳಿದ್ದು, ಭಾರತದಲ್ಲಿ ಸುಮಾರು 8.50 ಲಕ್ಷ ಸಹಕಾರ ಸಂಘಗಳಿದ್ದು, 31 ಕೋಟಿ ಸದಸ್ಯರಿದ್ದಾರೆ. ಸಹಕಾರಿ ಕ್ಷೇತ್ರದ ದೇಶದಾದ್ಯಂತ ವ್ಯಾಪಕವಾಗಿ ಬೆಳೆದಿರುವುದಕ್ಕೆ ಇದೇ ಸಾಕ್ಷಿ. ಈ ಬೆಳವಣಿಗೆ ದೇಶದ ಆರ್ಥಿಕ ಹಾಗೂ ಸಾಮಾಜಿಕ ಬೆಳವಣಿಗೆಯನ್ನೂ ಬಿಂಬಿಸುತ್ತದೆ. ಸಹಕಾರಿ ರಂಗ ಒಂದು ಕ್ಷೇತ್ರಕ್ಕೆ ಸೀಮಿತವಾಗಿಲ್ಲ. ಆಡು ಮುಟ್ಟದ ಸೊಪ್ಪಿಲ್ಲ ಎಂಬಂತೆ ಬದುಕಿನ ಎಲ್ಲ ಕ್ಷೇತ್ರಗಳಲ್ಲಿ ಸಹಕಾರ ರಂಗ ವ್ಯಾಪಿಸಿಕೊಂಡಿದೆ. ಸಹಕಾರಿ ರಂಗದ ಅಭಿವೃದ್ಧಿ , ರಾಜ್ಯ ಮತ್ತು ದೇಶದ ಜಿಡಿಪಿಯ ಬೆಳವಣಿಗೆಯ ಮೇಲೂ ಪರಿಣಾಮವನ್ನು ಬೀರುತ್ತದೆ. ದೇಶದ ಆಂತರಿಕ ಕೊಡುಗೆಯ ಹೆಚ್ಚಳದಲ್ಲಿ ಸಹಕಾರಿ ಕ್ಷೇತ್ರದ ಕೊಡುಗೆ ಅಪಾರವಾಗಿದೆ. ದೇಶದಲ್ಲಿ ಅನೇಕ ಜಾತಿ ಧರ್ಮಗಳಿವೆ. ಆದರೆ ಸಹಕಾರಿ ರಂಗಕ್ಕೆ ಯಾವ ಜಾತಿ ಧರ್ಮಗಳ ಸೋಂಕು ಇಲ್ಲ. ಜಾತಿ ರಹಿತವಾದ ಧರ್ಮರಹಿತವಾದ ಕ್ಷೇತ್ರವೆಂದರೆ ಸಹಕಾರಿ ಕ್ಷೇತ್ರ ಎಂದರು.

**ದಲಿತರು, ಮಹಿಳೆಯರು ಸಹಕಾರಿ ಸದಸ್ಯರಾಗಲು ಪ್ರೋತ್ಸಾಹ:** ನಾನು ಹಿಂದೆ ಮುಖ್ಯಮಂತ್ರಿಯಾಗಿದ್ದಾಗ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಮಹಿಳೆಯರನ್ನು ಸಹಕಾರ ಸಂಘದ ಸದಸ್ಯರಾಗಲು ಸರ್ಕಾರವೇ ಜನರ ಪರವಾಗಿ ಶೇರು ಮೊತ್ತವನ್ನು ಭರಿಸಲಾಗಿತ್ತು. ಈ ಕಾರ್ಯಕ್ರಮ ಇಂದಿಗೂ ಮುಂದುವರೆಯುತ್ತಿದೆ. ಎಲ್ಲ ದಲಿತರು ಹಾಗೂ ಮಹಿಳೆಯರು ಸಹಕಾರ ಸಂಘದ ಸದಸ್ಯರಾಗಬೇಕು. ಸರ್ಕಾರದ ಸಹಾಯದಿಂದಾಗಿ ದಲಿತರು ಹಾಗೂ ಮಹಿಳೆಯರು ಹಾಲು ಸಹಕಾರ ಸಂಘದಲ್ಲಿ ಸದಸ್ಯರಾಗುತ್ತಿದ್ದಾರೆ. ನಮ್ಮ ಸರ್ಕಾರ ಹಾಲಿನ ಪ್ರತಿ ಲೀ.ಗೆ ರೂ. 5 ಗಳ ಪ್ರೋತ್ಸಾಹಧನ ನೀಡಲಾಗುತ್ತಿದೆ. ಈಗ ಪ್ರೋತ್ಸಾಹ ಧನವನ್ನು ಪ್ರತಿ ಲೀ.ಗೆ 5 ರೂ. ನಿಂದ ಹಿಡಿದು 8 ರೂ.ಗೆ ಹೆಚ್ಚಳ ಮಾಡಿ ನೀಡಲಾಗುತ್ತಿದ್ದು, ಈ ಮೊತ್ತ ರೈತರಿಗೆ ನೇರವಾಗಿ ತಲುಪುತ್ತಿದೆ ಎಂದರು.

ಹಾಲು ಉತ್ಪಾದಕರ ಸಹಕಾರ ಸಂಘದವರು ಹಾಲು ಉತ್ಪಾದನೆ ಜಾಸ್ತಿಯಾಗಿದ್ದು, ಸರ್ಕಾರ ಈ ನಿಟ್ಟಿನಲ್ಲಿ ಸಹಾಯ ಮಾಡಬೇಕೆಂಬ ಬೇಡಿಕೆಯನ್ನು ಸಲ್ಲಿಸಿತ್ತು. ಆದ್ದರಿಂದ ಶಾಲಾ ಮಕ್ಕಳಿಗೆ ಉಚಿತವಾಗಿ ಹಾಲು ನೀಡುವ ಯೋಜನೆಯನ್ನು ಹಮ್ಮಿಕೊಂಡು , ಹಾಲು ಉತ್ಪಾದಕರ ಸಮಸ್ಯೆ ಬಗೆಹರಿಸುವ ಜೊತೆಗೆ ಮಕ್ಕಳ ಪೌಷ್ಟಿಕತೆ ಹೆಚ್ಚಳಕ್ಕೂ ಅನುಕೂಲ ಕಲ್ಪಿಸಲಾಯಿತು ಎಂದರು.

**ಪ್ರಮುಖ ಸುದ್ದಿ**

## ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್

# ಅನೀಮಿಯ ಮುಕ್ತ ಪೌಷ್ಟಿಕ ಕರ್ನಾಟಕದತ್ತ ನಮ್ಮ ಹೆಜ್ಜೆ



» **ಚಿತ್ರದುರ್ಗ**

ಅನೀಮಿಯ (ರಕ್ತಹೀನತೆ) ಯಶಸ್ವಿಯಾಗಿ ತಡೆಗಟ್ಟಲು ಅರಿವು, ಪರೀಕ್ಷೆ, ಚಿಕಿತ್ಸೆ ಬಹುಮುಖ್ಯ ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು. ನಗರ ಸರ್ಕಾರಿ ಬಾಲಕಿಯರ ಕಾಲೇಜಿನಲ್ಲಿ ಬುಧವಾರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಮದ ಅನೀಮಿಯ ಮುಕ್ತ ಪೌಷ್ಟಿಕ ಕರ್ನಾಟಕ ಯೋಜನೆಯ ಅನುಷ್ಟಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ರಕ್ತಹೀನತೆ ಎಂದರೆ ಇದು ದೈಹಿಕ ಅಗತ್ಯಗಳನ್ನು ಪೂರೈಸಲು ಕೆಂಪು ರಕ್ತ ಕಣಗಳ ಸಂಖ್ಯೆ ಅಥವಾ ಅವುಗಳ ಆಮ್ಲಜನಕ–ಸಾಗಿಸುವ ಸಾಮರ್ಥ್ಯವು ಸಾಕಷ್ಟಿಲ್ಲದ ಸ್ಥಿತಿಯಾಗಿದೆ. ಕಬ್ಬಿಣದ ಕೊರತೆಯು ರಕ್ತಹೀನತೆಗೆ ಸಾಮಾನ್ಯ ಕಾರಣವಾಗಿದೆ ಎಂದರು. ರಕ್ತಹೀನತೆ ತಡೆಗಟ್ಟಲು ತಾಲೂಕಿನಲ್ಲಿ ಇಲಾಖೆಯ ಮಾರ್ಗಸೂಚಿಯಂತೆ ಮೊದಲ ಹಂತದಲ್ಲಿ ಹದಿಹರೆಯದವರಿಗೆ ಪದವಿಪೂರ್ವ ಶಿಕ್ಷಣ ಪಡೆಯುತ್ತಿರುವ ಒಟ್ಟು 12,169 ಮಕ್ಕಳನ್ನು ಗುರುತಿಸಿ ಕ್ರಿಯಾ ಯೋಜನೆ ತಯಾರಿಸಲಾಗಿದೆ. ತಾಲೂಕಿನ ರಾಷ್ಟ್ರೀಯ ಬಾಲ ಸ್ವಾಸ್ಥ್ಯ ತಂಡದ ವೈದ್ಯಾಧಿಕಾರಿಗಳು , ಶುಶ್ರೂಷಕರು ತಪಾಸಣೆ ನಡೆಸಿ ತೀವ್ರ ಮತ್ತು ಸಾಧಾರಣ ರಕ್ತ ಹೀನತೆಯ ಮಕ್ಕಳಿಗೆ ಕಬ್ಬಿನಾಂಶ ಮತ್ತು ಪೋಲಿಕಾಸಿಡ್ ಅಂಶದ ಮಾತ್ರೆಗಳನ್ನು ವಿತರಿಸುವ ಈ ಮೂಲಕ ರಕ್ತಹೀನತೆ ತಡೆಗಟ್ಟುವುದಾಗಿದೆ ಎಂದರು. ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮಾತನಾಡಿ, ರಾಜ್ಯದಲ್ಲಿ ರಕ್ತಹೀನತೆಯಿಂದ ಬಳಲುತ್ತಿರುವ 16 ರಿಂದ 18 ವರ್ಷದ ಯುವ ಜನರನ್ನು ಪತ್ತೆಹಚ್ಚಿ, ಅವರಿಗೆ ಪೂರಕ ಚಿಕಿತ್ಸಾ ಕ್ರಮಗಳ ಮೂಲಕ ಆರೋಗ್ಯ ಸುಧಾರಣೆ ಮಾಡಲು ಆರೋಗ್ಯ ಇಲಾಖೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಕಾರ್ಯಕ್ರಮ ಹಮ್ಮಿಕೊಂಡಿದೆ.

ಪುಟ ↘ 2



## ಫಾಸ್ಟ್ ನ್ಯೂಸ್

### ಅನೀಮಿಯ ಮುಕ್ತ ಪೌಷ್ಠಿಕ ಕರ್ನಾಟಕದತ್ತ ನಮ್ಮ ಹೆಜ್ಜೆ

» ಮೊದಲ ಪುಟದಿಂದ

ಮೊದಲ ಹಂತದಲ್ಲಿ ಜಿಲ್ಲೆಯ ಎಲ್ಲ ಕಾಲೇಜುಗಳಲ್ಲಿ ಪ್ರಥಮ ಹಾಗೂ ದ್ವಿತೀಯ ಪಿಯುಸಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಆಯಾ ಕಾಲೇಜುಗಳಲ್ಲಿಯೇ ಅವರಲ್ಲಿನ ಹಿಮೋಗ್ಲೋಬಿನ್ ಅಂಶದ ಪ್ರಮಾಣವನ್ನು ಪರೀಕ್ಷಿಸಿ 11 ಕ್ಕಿಂತ ಕಡಿಮೆ ಹಿಮೋಗ್ಲೋಬಿನ್ ಅಂಶ ಹೊಂದಿರುವ ವಿದ್ಯಾರ್ಥಿಗಳ ವಿವರವನ್ನು ಸಂಗ್ರಹಿಸಲಾಗುವುದು, ಇದಕ್ಕಾಗಿ ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದ ವೈದ್ಯರ ತಂಡದ ನೆರವು ಪಡೆಯಲಾಗುವುದು. ಮೊದಲು ದತ್ತಾಂಶ ಸಂಗ್ರಹಿಸಿ, ರಕ್ತಹೀನತೆಯಿಂದ ಬಳಲುತ್ತಿರುವ ಯುವಜರಿಗೆ ಫೋಲಿಕ್ ಆಮ್ಲ, ಕಬ್ಬಿಣಾಂಶದ ಮಾತ್ರೆಗಳನ್ನು ನೀಡುವುದು, ಪೌಷ್ಠಿಕ ಆಹಾರ ಸೇವನೆ ಕುರಿತಂತೆ ಜಾಗೃತಿ ಮೂಡಿಸುವುದು ಮುಂತಾದ ಆರೋಗ್ಯ ಸುಧಾರಣಾ ಕ್ರಮಗಳನ್ನು ಕೈಗೊಳ್ಳಲಾಗುವುದು. ಮಹಿಳೆಯರಲ್ಲಿ ರಕ್ತ ಹೀನತೆ ತಡೆಗಟ್ಟಲು ಸ್ವ ಸಹಾಯ ಗುಂಪುಗಳೊಂದಿಗೆ ಸಭೆ ನಡೆಸಿ, ಜಾಗೃತಿ ಮೂಡಿಸಲಾಗುವುದು ಎಂದರು.

ಜಿಲ್ಲೆಯಲ್ಲಿ 129 ಕಾಲೇಜುಗಳನ್ನು ಗುರುತಿಸಿ ಸರ್ಕಾರಿ ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಒಟ್ಟು 30,929 ಮಕ್ಕಳ ಪಟ್ಟಿಯನ್ನು ತಯಾರಿಸಿ ಬೇಡಿಕೆಗೆ ಅನುಗುಣವಾಗಿ ಹಿಮೋಗ್ಲೋಬಿನ್ ತಪಾಸಣೆ ಮಾಡುವ ಯಂತ್ರ ಮತ್ತು ರಾಷ್ಟ್ರೀಯ ಬಾಲ ಸ್ವಾಸ್ಥ್ಯ ತಂಡದ ಸಿಬ್ಬಂದಿ ವರ್ಗದವರನ್ನು ನಿಯೋಜಿಸಿ ಅನೀಮಿಯ ಮುಕ್ತ ಪೌಷ್ಠಿಕ ಕರ್ನಾಟಕ ಯೋಜನೆಯನ್ನು ಅನುಷ್ಠಾನ ಗೊಳಿಸಲಾಗುತ್ತಿದೆ ಎಂದರು. ಕಾರ್ಯಕ್ರಮದಲ್ಲಿ ರಾಷ್ಟ್ರೀಯ ರಾಷ್ಟ್ರೀಯ ಬಾಲ ಸ್ವಾಸ್ಥ್ಯ ತಂಡದ ವೈದ್ಯಾಧಿಕಾರಿಗಳಾದ ಡಾ.ವಾಣಿ, ಡಾ.ಮಂಜುಳಾ , ಶುಶ್ರೂಷಕಿ ಅಕ್ಷತಾ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ, ಆಶಾ ಕಾರ್ಯಕರ್ತೆಯರು ಭಾಗವಹಿಸಿ ಕಾಲೇಜಿನ ಒಟ್ಟು 200 ವಿದ್ಯಾರ್ಥಿಗಳಿಗೆ ಹಿಮೋಗ್ಲೋಬಿನ್ ಪ್ರಮಾಣ ತಪಾಸಣೆ ನಡೆಸಿ 30 ವಿದ್ಯಾರ್ಥಿಗಳು ತೀವ್ರ ರಕ್ತ ಹೀನತೆ 65 ಜನ ವಿದ್ಯಾರ್ಥಿಗಳಿಗೆ ಸಾಧಾರಣ ರಕ್ತ ಹೀನತೆ ಖಚಿತತೆ ನಡೆಸಿ ರಕ್ತಹೀನತೆ ಸರಿದೂಗಿಸಲು ಕಬ್ಬಿನಾಂಶದ ಮಾತ್ರೆಗಳನ್ನು ಕ್ರಮವಾಗಿ ನುಂಗಲು ನೀಡಲಾಯಿತು.

### ಶಂಕ್ರಣ್ಣ ಅವರ ನಿಧನ ರೈತ ಸಮುದಾಯಕ್ಕೆ ತುಂಬಲಾರದ ನಷ್ಟ: ಶಾಸಕ ಟಿ.ರಘುಮೂರ್ತಿ



ನುಲೇನೂರು ಶಂಕರಪ್ಪ ಅವರ ಅವರ ಅಕಾಲಿಕ ನಿಧನದಿಂದಾಗಿ ಜಿಲ್ಲೆಯ ರೈತ ಸಮುದಾಯ ಪ್ರಬಲ ಹೋರಾಟಗಾರರನ್ನು ಕಳೆದುಕೊಂಡಿದೆ. ಸಾವಿನ ಸುದ್ದಿ ದಿಗ್ಭ್ರ ಉಂಟುಮಾಡಿದೆ. ನಮ್ಮ ಕ್ಷೇತ್ರಕ್ಕೆ ವಿ.ವಿ.ಸಾಗರ ನೀರು ಹರಿಸುವ ಸಂದರ್ಭದಲ್ಲಿ ಹೋರಟಕ್ಕೆ ಬೆಂಬಲವಾಗಿ ನಿಂತಿದ್ದರು.ರೈತಪರ ದನಿಯಾಗಿ ರೈತ ಹೋರಾಟದ ಮುಂಚೂಣಿ ನಾಯಕರಾಗಿದ್ದರು. ಜಿಲ್ಲೆಯ ಸಮಸ್ಯೆಗಳನ್ನು ಹಲವು ಬಾರಿ ನನ್ನ ಜೊತೆ ಚರ್ಚೆಗಳನ್ನು ನಡೆಸುತ್ತಿದ್ದರು. ತಮ್ಮ ರೈತ ಹೋರಾಟಳಿಂದ ಜನಮಾನಸದಲ್ಲಿ ವಿಶಿಷ್ಟ ಸ್ಥಾನ ಪಡೆದಿದ್ದರು. ಶಂಕ್ರಣ್ಣ ಅಂತ ಹೆಸರು ಮಾಡಿ ನೀರಾವರಿ ಸೇರಿ ಹಲವು ಹೋರಟಕ್ಕೆ ಬೆನ್ನೆಲುಬಾಗಿದ್ದರು. ಇವರ ನಿಧನ ಅತೀವ ದುಃಖವನ್ನುಂಟು ಮಾಡಿದೆ. ಅವರ ಕುಟುಂಬಕ್ಕೆ ನನ್ನ ಸಾಂತ್ವನಗಳು..

» **ಟಿ.ರಘುಮೂರ್ತಿ ಚಳ್ಳಕೆರೆ ವಿಧಾನ ಸಭಾ ಕ್ಷೇತ್ರದ ಶಾಸಕರು**

### ರಾಷ್ಟ್ರೀಯ ಐಕ್ಯತಾ ಸಪ್ತಾಹ ಪ್ರಮಾಣ ವಚನ



» **ಹೊಸದುರ್ಗ**

ಸರ್ಕಾರ ನವಂಬರ್ 19 ರಿಂದ ನವಂಬರ್ 25 ರವರೆಗೆ ರಾಷ್ಟ್ರೀಯ ಐಕ್ಯತಾ ಸಪ್ತಾಹ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಸುತ್ತೋಲೆ ಹೊರಡಿಸಿರುವಂತೆ ಪುರಸಭೆಯಲ್ಲಿ ರಾಷ್ಟ್ರದ ಸ್ವಾತಂತ್ರ್ಯ ಹಾಗೂ ಐಕ್ಯತೆಯನ್ನು ಬಲಪಡಿಸಲು ದೇಶದಲ್ಲಿ ಹಿಂಸಾಚಾರ ಮತ್ತು ಕೋಮುದ್ವೇಶವನ್ನು ತಡೆಗಟ್ಟುವುದಕ್ಕಾಗಿ ರಾಷ್ಟ್ರೀಯ ಐಕ್ಯತಾ ಸಪ್ತಾಹ ಅಂಗವಾಗಿ ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು.ಜಿ.ವಿ ರವರು ಪ್ರತಿಜ್ಞಾ ವಿದಿಯನ್ನು ಬೋದಿಸಿ ಶಾಂತಿ ಸೌಹಾರ್ದ್ಯತೆ ಕಾಪಾಡಲು ಮನವಿ ಮಾಡಿದರು. ಈ ಸಂದರ್ಭದಲ್ಲಿ, ಕಂದಾಯ ನಿರೀಕ್ಷಕ ಜಿ.ಎನ್ ಕುಮಾರ್, ಕಿರಿಯ ಆರೋಗ್ಯ ನಿರೀಕ್ಷಕಿ ಕಲ್ಪನ.ಟಿ ಹಾಗೂ ಸಿಬ್ಬಂದಿಗಳಾದ ಸಾವಿತ್ರಿ, ವಿನಯ್, ಅಶ್ವತಮ್ಮ, ಸುಮನ, ಗೀತ, ತಿಪ್ಪೇಶ್, ವಿಕಾಸ್, ಹನುಮಂತಪ್ಪ, ಅಶ್ವಿನಿ, ಹಾಜರಿದ್ದರು.

# ನವಜಾತ ಶಿಶು ಹಾರೈಕೆ ಹಾಗೂ ಪೋಷಣೆಗೆ ಎಲ್ಲರ ಸಹಕಾರ ಅಗತ್ಯ: ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ರವೀಂದ್ರ

» **ಚಿತ್ರದುರ್ಗ**

ನವಜಾತ ಶಿಶು ಹಾರೈಕೆ ಹಾಗೂ ಪೋಷಣೆಗೆ ತಾಯಿ ಹಾಗೂ ಕುಟುಂಬ ಸೇರಿದಂತೆ ಸಮುದಾಯದ ಎಲ್ಲರ ಸಹಕಾರ ಅಗತ್ಯವಾಗಿದೆ. ಮಗುವಿನ ಪೋಷಣೆಗೆ ಸರ್ಕಾರದಿಂದ ಸಿಗುವ ಆರೋಗ್ಯ ಸೇವಾ ಸೌಲಭ್ಯಗಳನ್ನು ಎಲ್ಲರೂ ತಪ್ಪದೇ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ರವೀಂದ್ರ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಸ್ಪತ್ರೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ನಗರದ ಜಿಲ್ಲಾ ಆಸ್ಪತ್ರೆಯ ಬಿ.ಸಿ.ರಾಯ್ ಸಭಾಂಗಣದಲ್ಲಿ ಈಚಗೆ ನಡೆದ ಎದೆ ಹಾಲುಣಿಸುವ ತಾಯಂದಿರುಗಳು ಮತ್ತು ಪೋಷಕರಿಗೆ ಮಾಹಿತಿ ನೀಡುವ ಹಾಗೂ ರಾಷ್ಟ್ರೀಯ ನವಜಾತ ಶಿಶು ಸಪ್ತಾಹ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ತಾಯಿಯ ಗರ್ಭದಿಂದ ಜನಿಸಿದ ಮಗು ಭೂಮಿಯ ವಾತಾವರಣಕ್ಕೆ ಹೊಂದಿಕೊಳ್ಳಲು ಕಾಲಾವಕಾಶ ಬೇಕು. ಹೆರಿಗೆ ಆದ ಒಂದು ಗಂಟೆಯ ಒಳಗೆ ತಾಯಿಯ ಮುಗ್ಗುಲಲ್ಲಿ ಎದೆಗೆ ತಾಕುವಂತೆ ಮಗುವನ್ನು ಮಲಗಿಸಿ ಹಾಲನ್ನು ಮಗುವಿಗೆ ಕುಡಿಸುವುದರ ಮುಖಾಂತರ ಮಗುವನ್ನು ಪೋಷಣೆ ಆರಂಭಿಸಬೇಕು. ನಂತರ ಮಗು ಸಂಪೂರ್ಣ ಬೆಳವಣಿಗೆ ಹೊಂದುವರೆಗೆ ತಾಯಿ ಸೇರಿದಂತೆ ಕುಟುಂಬದ



ಪ್ರತಿಯೊಬ್ಬರು ಹಾರೈಕೆ ಮಾಡಬೇಕು. ಮಗುವಿಗೆ ಕಾಲ ಕಾಲಕ್ಕೆ ನಿಗದಿ ಪಡಿಸಿದರು ಲಸಿಕೆಗಳನ್ನು ಕೊಡಿಸಬೇಕು ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ರೇಣುಪ್ರಸಾದ್ ಮಾತನಾಡಿ, ಎದೆಹಾಲು ಉಣಿಸುವ ತಾಯಂದಿರುಗಳಿಗೆ ಸೂಕ್ತ ಅರಿವು ಮೂಡಿಸುವುದರ ಮುಖಾಂತರ ಶಿಶುಮರಣ ತಗ್ಗಿಸುವ ಗುರಿ ಆರೋಗ್ಯ ಇಲಾಖೆಯದ್ದಾಗಿದೆ. ನವಜಾತ ಶಿಶುವಿನ ಮರಣದ ಪ್ರಮಾಣ 1000 ಜೀವಂತ ಜನನಗಳಿಗೆ 25 ರಿಂದ 14ಕ್ಕೆ ಇಳಿದಿದೆ. ಆದರೂ ಹುಟ್ಟಿದ ದಿನ ದಂದು ಕಡಿಮೆ ತೂಕ, ಹೆರಿಗೆಯಿಂದಾದ ಸಮಸ್ಯೆ, ಉಸಿರಾಟದ ತೊಂದರೆ, ಇನ್ನಿತರ ಕಾರಣಗಳಿಂದ ನವಜಾತ ಶಿಶುಗಳು ಸಾವುಪ್ಪುತ್ತಿವೆ. ಮೂಲ ಕಾರಣವನ್ನು ಹುಡುಕಿ ತಾಯಿ ಮತ್ತು ಮಗುವಿಗೆ ಉತ್ತಮ ಆರೋಗ್ಯ ಸೇವೆ ನೀಡುವುದರ ಮುಖಾಂತರ ನವಜಾತ ಶಶಿವಿನ ಮರಣವನ್ನು ತಪ್ಪಿಸಲು ಶ್ರಮಿಸಲಾಗುತ್ತಿದೆ ಎಂದು ಹೇಳಿದರು.

ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ ಡಾ. ಅಭಿನವ ಮಾತನಾಡಿ, ಜನಿಸಿದ ಮಗುವಿಗೆ ಒಂದು ಗಂಟೆಯ ಒಳಗೆ ತಪ್ಪದೆ ಎದೆ ಹಾಲು ಕುಡಿಸಬೇಕು. ಯಾವುದೇ ಕಾರಣಕ್ಕೂ ಜೇನುತುಪ್ಪ, ಕತ್ತೆ ಹಾಲು ನೀಡಬಾರುದು. ಎದೆ ಹಾಲು ಕುಡಿಯಲು ಮಗು ಏಕೆ ಹಿಂದೇಟು ಹಾಕುತ್ತಿದ್ದರೆ ಅದರ ಕಾರಣ ಪತ್ತೆ ಹಚ್ಚಬೇಕು. ತಾಯಿಗೆ ಸೂಕ್ತ ಮಾರ್ಗದರ್ಶನ ನೀಡಿ, ಎದೆ ಹಾಲು ಉತ್ಪತ್ತಿಗೆ ಸೂಕ್ತ ಸಲಹೆ ಮಾಹಿತಿಯನ್ನು ಶುಶ್ರೂಷ ಅಧಿಕಾರಿಗಳು ನೀಡಬೇಕು. ಮಗು ಜನಿಸಿದ ಮೊದಲ ವಾರದಲ್ಲಿ ತೀವ್ರ ನಿಗಾ ವಹಿಸುವುದು ಮತ್ತು ಸಮುದಾಯ ಸಹಭಾಗಿತ್ವ ಕೂಡ ಬಹುಮುಖ್ಯ ಎಂದರು. ಆರು ತಿಂಗಳ ತನಕ ಮಗುವಿಗೆ ತಾಯಿಯ ಎದೆ ಹಾಲನ್ನು ಮಾತ್ರ ಕೊಡಬೇಕು. ಯಾವುದೇ ಕಾರಣಕ್ಕೂ ನೀರು ಸಹ ಕುಡಿಸಬಾರದು ಎಂದರು.ಹಿರಿಯ ಮಕ್ಕಳ ತಜ್ಞ ಡಾ. ಶ್ರೀರಾಮ್ ಅವರು ಮಾತನಾಡಿ, ಆಸ್ಪತ್ರೆಯಲ್ಲಿ ಹೆರಿಗೆಯಾದ ತಾಯಿ ಮತ್ತು ಮಗುವನ್ನು 48 ಗಂಟೆಗಳ ತೀವ್ರ ನಿಗಾದಲ್ಲಿ ಇಡಲಾಗುವುದು. ಮಗುವಿನಲ್ಲಿ ಉಸಿರಾಟ ತೊಂದರೆ, ಎದೆಹಾಲು ಕುಡಿಯದಿರುವುದು, ಜ್ವರ, ಫಿಟ್ಸ್, ಇನ್ನಿತರ ಆರೋಗ್ಯ ಸಮಸ್ಯೆಗಳು ಕಂಡುಬಂದಲ್ಲಿ ತಾಲ್ಲೂಕು ಮಟ್ಟದ ನವಜಾತ ಶಿಶು ಸ್ಥಿರೀಕರಣ ಘಟಕದಲ್ಲಿ ಸೂಕ್ತ ಚಿಕಿತ್ಸೆ ನೀಡಲಾಗುತ್ತದೆ. ಮಗುವಿಗೆ ಹೆಚ್ಚಿನ ಚಿಕಿತ್ಸೆ ಅವಶ್ಯವಿದ್ದಲ್ಲಿ ಜಿಲ್ಲಾ ಆಸ್ಪತ್ರೆಗೆ ಶಿಫಾರಸ್ಸು ಮಾಡಲಾಗುವುದು. ಆಸ್ಪತ್ರೆಯಿಂದ ಮನೆಗೆ ತೆರಳಿದ ತಾಯಿ ಮಗುವನ್ನು ಆಶಾ ಕಾರ್ಯಕರ್ತೆಯರು ನಿಯಮಾನುಸಾರ ಅನುಸರಣ ಭೇಟಿ ಮಾಡಿ ಸೂಕ್ತ ಆರೋಗ್ಯ ಮಾರ್ಗದರ್ಶನ ನೀಡುತ್ತಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಹಿರಿಯ ಮಕ್ಕಳ ತಜ್ಞರಾದ ಡಾ ಅನುರಾಧ ಅವರು ಮಾತನಾಡಿ, ನವಜಾತ ಶಿಶುವಿನಲ್ಲಿ ಕಂಡುಬರುವ ಅಪಾಯದ ಚಿಹ್ನೆಗಳ ಗುರುತಿಸುವುದು ಹೇಗೆ ಎಂಬುದನ್ನು ತಾಯಂದಿರುಗಳಿಗೆ ತಿಳಿಸಿದರು.ನಿವಾಸಿ ವೈದ್ಯಾಧಿಕಾರಿ ಡಾ.ಆನಂದ್ ಪ್ರಕಾಶ್, ಎನ್‌ಆರ್‌ಸಿ ವೈದ್ಯಾಧಿಕಾರಿ ಡಾ.ನಾಗರಾಜ್ ನಾಯ್ಕ್, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ, ಜಿಲ್ಲಾ ಆಶಾ ಬೋಧಕಿ ಪೂರ್ಣಿಮಾ, ಶುಶ್ರೂಷ ಅಧೀಕ್ಷಕಿ ಶಾಂತಮ್ಮ, ಆರ್.ಸಿ ಡಯಟಿಷಿಯನ್ ಎನ್. ಚಂದ್ರಕಲಾ, ಆರೋಗ್ಯ ನಿರೀಕ್ಷಣಾಧಿಕಾರಿ ಅಶೋಕ್, ಎಫ್ ಡಬ್ಲ್ಯೂ ಕೌನ್ಸಿಲರ್ ಕುಸುಮ, ಅರ್ಜುನ್, ಕರಕಪ್ಪ ಮೇಟಿ, ವ್ಯಾಕ್ಸೀನ್ ಕೋಲ್ಡ್ ಚೈನ್ ಮ್ಯಾನೇಜರ್ ವೀರೇಶ್ ಮಕ್ಕಳ ಆರೋಗ್ಯ ಕೌನ್ಸಿಲರ್ ಮಾರಕ್ಕ ಸೇರಿದಂತೆ ಎದೆಹಾಲು ಉಣಿಸುವ 25ಕ್ಕೂ ಹೆಚ್ಚು ತಾಯಂದಿರು ಮತ್ತು ಪೋಷಕರು ಮತ್ತಿತರರು ಇದ್ದರು.

## ‘ಚದುರಂಗ’ದಿಂದ ಮಕ್ಕಳ ಬೌದ್ಧಿಕಮಟ್ಟ ಹೆಚ್ಚಾಗುತ್ತದೆ

» **ದಾವಣಗೆರೆ**

ಚದುರಂಗ ಆಟದಿಂದ ಮಕ್ಕಳಲ್ಲಿನ ಕೌಶಲ್ಯತೆ ಗುರುತಿಸಬಹುದು, ಅಷ್ಟೇಅಲ್ಲಾ ಮಕ್ಕಳ ಬೌದ್ಧಿಕ ಮತ್ತು ಮಾನಸಿಕ ಬುದ್ದಿಮಟ್ಟ ಹೆಚ್ಚು ಮಾಡಬಹುದು ಎಂದು ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕ ವಿಶ್ವೇಶ್ವರಯ್ಯ ತಿಳಿಸಿದರು. ನಗರದ ಶ್ರೀಸೋಮೇಶ್ವರ ವಿದ್ಯಾಲಯದಲ್ಲಿ ನಡೆದ ಜಿಲ್ಲಾ ಮಟ್ಟದ ಅಂತರ್ ಶಾಲಾ ‘ಶ್ರೀಸೋಮೇಶ್ವರ ಚದುರಂಗಸಿರಿ’ ಚದುರಂಗ ಸ್ಪರ್ಧೆ ಉದ್ಘಾಟನೆ ಮಾಡಿ ಈ ವಿಷಯ ತಿಳಿಸಿದರು. ಚದುರಂಗ ಆಟವನ್ನು ನಾವು ನಿರ್ದಿಷ್ಟ ಸ್ಥಳದಲ್ಲಿಯೇ ಆಡಬೇಕೆಂದಿಲ್ಲ, ಮನೆಯಲ್ಲಿ ಆಟವಾಡಬಹುದು, ಯಾವುದೇ ಹೆಚ್ಚು ಖರ್ಚಿಲ್ಲದೆ ಆಡುವ ಆಟ ಎಂದರು. ಮಕ್ಕಳು ಮೊಬೈಲ್ ಬಳಸುವ ಬದಲು ಮನೆಯಲ್ಲಿ ಚದುರಂಗ ಆಡಿದರೆ ಅವರು ಮಾನಸಿಕವಾಗಿಯೂ ಸದೃಢರಾಗಬಹುದು ಎಂದರು. ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದ ಪ್ರಾಂಶುಪಾಲರಾದ ಶ್ರೀಮತಿ ಪ್ರಭಾವತಿ ಅವರು ಚದುರಂಗ ಆಟದಿಂದ ಏಕಾಗ್ರತೆಯನ್ನು ಹೆಚ್ಚಿಸಿಕೊಳ್ಳಬಹುದು, ಇದರಿಂದ ವಿದ್ಯಾರ್ಥಿಗಳಿಗೆ ಓದಲು ಹೆಚ್ಚು ಅನುಕೂಲವಾಗುತ್ತದೆ ಎಂದರು. ಕ್ರಮ, ನಿಯಮ, ಮುಂದಾಲೋಚನೆ, ತಾಳ್ಮೆ ಈ ನಾಲ್ಕು ಅಂಶಗಳು ಈ ಚದುರಂಗ ಆಟದಲ್ಲಿ ಅಡಗಿರುತ್ತದೆ



ಎಂದು ಕಿವಿಮಾತು ಹೇಳಿದರು. ಈ ಸ್ಪರ್ಧೆಗೆ ತೀರ್ಪುಗಾರರಾಗಿ ಸೋಮಶೇಖರ್ ಬಿರಾದರ್ ಆಗಮಿಸಿದ್ದರು, ದೈಹಿಕ ಶಿಕ್ಷಕರಾದ ನಾಗರಾಜ್, ಇಂದ್ರಮ್ಮ, ರಾಹುಲ್ ಹಾಗೂ ಶರ್ಮಿಳಾ ಸ್ಪರ್ಧಾಳುಗಳಿಗೆ ಆಟದ ನಿಯಮ ಕುರಿತು ವಿವರಿಸಿ ಮಕ್ಕಳಿಗೆ ಸಲಹೆ ಸೂಚನೆ ನೀಡಿದರು. ಹಿರಿಯರ ವಿಭಾಗದಲ್ಲಿ ಪ್ರಥಮ ಸ್ಥಾನ ನಿಶ್ಚಲ್ ಜಿ. ಎಸ್. ದ್ವಿತೀಯ ದಿಗಂತ ಎಂ.ಎಸ್. ತೃತೀಯ ದೀಕ್ಷಿತ್ ಪಿ ಎಂ ವಿಜೇತರಾದರೆ, ನಾಲ್ಕು ಸೌಮ್ಯ ಐದು ಸರ್ಮರ್ಥ್ ಶರ್ಮ ಆರನೇ ಸ್ಥಾನ ಸುಶ್ಚಿತ್ ಎ ಆಯ್ಕೆಯಾಗಿದ್ದಾರೆ. ಕಿರಿಯ ವಿಭಾಗದಲ್ಲಿ ಪ್ರಥಮ ಆರಾಧ್ಯ ದೀಪಕ್ ದ್ವಿತೀಯ ಉಮೇಯಾವನ್ ಸಿಂಹ 3ನೇ ರಮ್ಯಾ ಕೆ.ಎಸ್. 4ನೇ ಬಹುಮಾನಕ್ಕೆ ಶರತ್ ಕುಮಾರ್ ಎಂ ಎನ್ ಐದನೇ ಸ್ಥಾನಕ್ಕೆ ತೇಜಸ್ ಎಂಬಿ ಆಯ್ಕೆಯಾಗಿದ್ದಾರೆ.ಈ ಸಂದರ್ಭದಲ್ಲಿ ಆಡಳಿತಾಧಿಕಾರಿ ಹರೀಶ್ ಬಾಬು, ಮುಖ್ಯಶಿಕ್ಷಕರಾದ ಶ್ರೀಮತಿ ಗಾಯತ್ರಿ, ಶ್ರೀಮತಿ ಮಾಲಾ ಹಾಗೂ ಪ್ರಕಾಶ್ ಸೇರಿದಂತೆ ಶಾಲಾ ಸಿಬ್ಬಂದಿ ವಿದ್ಯಾರ್ಥಿಗಳು, ಪೋಷಕರು ಉಪಸ್ಥಿತರಿದ್ದರು.

## ವಿಶ್ವ ವಿಕಲಚೇತನರಿಗಾಗಿ ಕ್ರೀಡಾ ಸ್ಪರ್ಧೆಗಳ ಉದ್ಘಾಟನಾ ಸಮಾರಂಭ

» **ದಾವಣಗೆರೆ**

ನವಂಬರ್ 23 ರಂದು ಬೆಳಿಗ್ಗೆ 11 ಗಂಟೆಗೆ ಮೋತಿ ವೀರಪ್ಪ ಸರ್ಕಾರಿ ಪದವಿಪೂರ್ವ ಕಾಲೇಜು ಮೈದಾನದಲ್ಲಿ ವಿಶ್ವ ವಿಕಲಚೇತನರಿಗಾಗಿ ಕ್ರೀಡಾ ಸ್ಪರ್ಧೆಗಳ ಉದ್ಘಾಟನಾ ಸಮಾರಂಭವನ್ನು ಆಯೋಜಿಸಲಾಗಿದೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಮತ್ತು ವಿಕಲಚೇತನರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಘ ಸಂಸ್ಥೆಗಳು ಸಹಯೋಗದಲ್ಲಿ ಆಯೋಜಿಸಲಾದ ಕಾರ್ಯಕ್ರಮವನ್ನು ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾವೀರ.ಮ.ಕರೆಣ್ಣವರ ಉದ್ಘಾಟಿಸುವರು. ಅಪರ ಜಿಲ್ಲಾಧಿಕಾರಿ ಹಾಗೂ ವಿಶ್ವ ವಿಕಲಚೇತನರ ದಿನಾಚರಣೆಯ ಸಮಿತಿಯ ಅಧ್ಯಕ್ಷರಾದ ಪಿ.ಎನ್ ಲೋಕೇಶ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ವಾಸಂತಿ ಉಪ್ಪಾರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಕೆ.ಆರ್ ಜಯಲಕ್ಷ್ಮೀಬಾಯಿ ಭಾಗವಹಿಸಲಿದ್ದಾರೆ.

## ಜಾತಿ ಜನಗಣತಿ: ಒಕ್ಕಲಿಗರ ಸಂಘ ಮನವಿ ಸಲ್ಲಿಸಿದೆ

**ವರದಿ ಕೊಡುವ ಮುನ್ನವೇ ಏಕೆ ವಿರೋಧಿಸುತ್ತಿದ್ದೀರಿ ಎಂದು ಹೇಳಿದ್ದೇನೆ: ಮುಖ್ಯಮಂತ್ರಿ ಸಿದ್ದರಾಮಯ್ಯ**

» **ಬೆಂಗಳೂರು**

ಜಾತಿ ಜನಗಣತಿ ಪಡೆಯದಿರುವಂತೆ ಒಕ್ಕಲಿಗರ ಸಂಘ ಮನವಿ ಸಲ್ಲಿಸಿದ್ದು, ವರದಿ ಕೊಡುವ ಮುನ್ನವೇ ಏಕೆ ವಿರೋಧಿಸುತ್ತಿದ್ದೀರಿ ಎಂದು ಹೇಳಿದ್ದೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಮಾಧ್ಯಮದ ವರೊಂದಿಗೆ ಮಾತನಾಡಿದರು.

ಜಾತಿ ಜನಗಣತಿ ವರದಿ ಇನ್ನೂ ನಮ್ಮ ಕೈ ಸೇರಿಲ್ಲ. ಕೊಟ್ಟ ಮೇಲೆ ತೀರ್ಮಾನ ಕೈಗೊಳ್ಳಲಾಗುವುದು ಎಂದರು.

ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಸೇರಿದಂತೆ ಒಕ್ಕಲಿಗ ಸಮುದಾಯದ ಮುಖಂಡರು ಜಾತಿ ಜನಗಣತಿ ವರದಿ ತಿರಸ್ಕರಿಸಬೇಕೆಂದು ಮನವಿ ಸಲ್ಲಿಸಿರುವಬಗ್ಗೆ ಮಾಧ್ಯಮದವರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದರು.

ಮೂಲಪ್ರತಿ ಕಾಣೆಯಾಗಿದೆ ಎಂದು ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಜಯಪ್ರಕಾಶ್ ಹೆಗ್ಡೆ ಹೇಳಿಕೆ ಬಗ್ಗೆ ಪ್ರತಿಕ್ರಿಯೆ ನೀಡಿ ಈ ಬಗ್ಗೆ ನನಗೆ ತಿಳಿದಿಲ್ಲ ಎಂದರು. ನನ್ನನ್ನು ಭೇಟಿಯಾಗಿ ವರದಿ ಸಲ್ಲಿಸುತ್ತಾರೆ ಎಂದು ತಿಳಿಸಿದರು. ಅಲ್ಲಿಯವರೆಗೆ ಅವಧಿ ವಿಸ್ತರಣೆ ಮಾಡಿ ಎಂದು ಮನವಿ ಮಾಡಿದ್ದರು ಎಂದರು.



ವರದಿ ಯಾವಾಗ ಕೊಡುತ್ತಾರೋ ಅಲ್ಲಿಯವರೆಗೆ ಅವಧಿ ವಿಸ್ತರಣೆಯಾಗುತ್ತದೆ. 162 ಕೋಟಿ ಖರ್ಚು ಮಾಡಿ ವರದಿ ತಯಾರಿಸಲಾಗಿದೆ. ವರದಿ ಬಂದ ನಂತರ ಅವರ ಸಂಶಯಗಳ ನಿವಾರಣೆಯಾಗಲಿದೆಯೋ ಇಲ್ಲವೋ ನೋಡೋಣ . ವರದಿಯಲ್ಲಿ ಏನಿದೆ ಎಂದು ತಿಳಿದಿಲ್ಲ. ಡಿಸೆಂಬರ್ ನಲ್ಲಿ ವರದಿ ಸಲ್ಲಿಸುವ ನಿರೀಕ್ಷೆ ಇದೆ ಎಂದರು.

ಡಿಸಿಎಂ ನನ್ನೊಂದಿಗೆ ಈ ಬಗ್ಗೆ ಏನನ್ನೂ ಮಾತನಾಡಿಲ್ಲ ಎಂದು ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿಗಳು ಸ್ಪಷ್ಟಪಡಿಸಿದರು.

ನಿಗಮಮಂಡಳಿಗಳ ನೇಮಕಾತಿಗೆ ಸಂಬಂಧಿಸಿದಂತೆ ಪೂರ್ವಭಾವಿ ಚರ್ಚೆಯಾಗಿದ್ದು ಯಾರನ್ನು ಮಾಡಬೇಕೆಂಬ ಬಗ್ಗೆ ಅಂತಿಮಗೊಳಿ ಸಿಲ್ಲ ಎಂದರು.

**ಪ್ರಮುಖ ಸುದ್ದಿ**

# ವಾಯುಮಾಲಿನ್ಯ ಮಕ್ಕಳ ಮೇಲೆ ಹೆಚ್ಚು ಪರಿಣಾಮ ಬೀರಲಿದೆ

## ವಾಯುಮಾಲಿನ್ಯ ನಿಯಂತ್ರಣ ಮಾಸಾಚರಣೆ ಕಾರ್ಯಕ್ರಮದಲ್ಲಿ ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಎಂ.ಕಾಳಸಿಂಗ್

» **ಚಿತ್ರದುರ್ಗ**

ವಾಯುಮಾಲಿನ್ಯದ ಪರಿಣಾಮ ಪರಿಸರ ಕಲುಷಿತವಾಗಿ ವಾತಾವರಣದ ಮೇಲೆ ವ್ಯತಿರಿಕ್ತ ಪರಿಣಾಮ ಬೀರಿ, ಮಕ್ಕಳಿಗೆ ಅಪಾಯ ಉಂಟುಮಾಡಲಿದೆ ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಎಂ.ಕಾಳಸಿಂಗ್ ತಿಳಿಸಿದರು.

ನಗರದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಆವರಣದಲ್ಲಿ ಮಂಗಳವಾರ ಸಾರಿಗೆ ಇಲಾಖೆ ಹಾಗೂ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಎನ್‌ಎಸ್‌ಎಸ್ ಘಟಕದ ವತಿಯಿಂದ ಆಯೋಜಿಸಿದ್ದ ವಾಯುಮಾಲಿನ್ಯ ನಿಯಂತ್ರಣ ಮಾಸಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ನಮ್ಮ ಶ್ವಾಸಕೋಶ ಸ್ವಚ್ಛವಾಗಿರಬೇಕಾದರೆ ಉತ್ತಮ ವಾತಾವರಣ, ಪರಿಸರ ಸ್ವಚ್ಛತೆ ತುಂಬಾ ಅಗತ್ಯ.ವಾಹನದಟ್ಟಣೆಯಿಂದಾಗಿ ಅನಾರೋಗ್ಯ ಸಮಸ್ಯೆ ಉಲ್ಬಣವಾಗಿ ಜನರ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ. ಅದರಲ್ಲೂ ವಿಶೇಷವಾಗಿ ಮಕ್ಕಳ ಮೇಲೆ ತಕ್ಷಣ ಪ್ರಭಾವ ಉಂಟಾಗಿ ನೆಗಡಿ,




ಕೆಮ್ಮಿನಂತ ಕಾಯಿಲೆ ಪದೇ ಪದೇ ಪುನರಾವರ್ತಿತವಾಗುತ್ತಿರುತ್ತದೆ ಎಂದರು.

ಇಂದಿನ ದಿನಮಾನದಲ್ಲಿ ನಮ್ಮ ಗಮನ ವಾಯುಮಾಲಿನ್ಯ ತಡೆಗಟ್ಟುವ ಕಡೆ ಗಮನಹರಿಸಬೇಕಿದೆ. ನಮ್ಮ ಸುತ್ತಲಿನ ಪರಿಸರ ಸಂಪೂರ್ಣ ಗಿಡಮರಗಳಿಂದ ಕೂಡಿದ್ದರೆ ಮಾತ್ರ ವಾಯುಮಾಲಿನ್ಯದ ಅಡ್ಡ ಪರಿಣಾಮ ತಡೆಯಲು ಸಾಧ್ಯ ಎಂದು ತಿಳಿಸಿದ ಅವರು, ರಸ್ತೆ ಸುರಕ್ಷತೆ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಿದರು.

ಸಾರಿಗೆ ಇಲಾಖೆ ಕಚೇರಿ ಅಧೀಕ್ಷಕ ಹೇಮಂತ್ ಕುಮಾರ್ ಮಾತನಾಡಿ, ಪ್ರತಿ ವರ್ಷ ನವೆಂಬರ್ ಮಾಹೆಯಲ್ಲಿ ಸಾರಿಗೆ ಇಲಾಖೆ ವತಿಯಿಂದ ವಾಯುಮಾಲಿನ್ಯ ಮಾಸಾಚರಣೆ ಹಮ್ಮಿಕೊಂಡು, ವಾಹನಗಳಿಂದ ಆಗುವ ಮಾಲಿನ್ಯ ಕಡಿಮೆಗೊಳಿಸುವ ಸಲುವಾಗಿ ವಾಯುಮಾಲಿನ್ಯ ಮಾಸಾಚರಣೆ ಮೂಲಕ ಅರಿವು ಮೂಡಿಸಲಾಗುತ್ತದೆ ಎಂದರು. ವಾಯುಮಾಲಿನ್ಯ ತಡೆಗಟ್ಟುವ ನಿಟ್ಟಿನಲ್ಲಿ ಸಾರ್ವಜನಿಕರು ವೈಯಕ್ತಿಕ ವಾಹನ ಕಡಿಮೆ ಮಾಡಿ, ಸಮೂಹ ಸಾರಿಗೆ ಬಳಸಬೇಕು, ಪರಿಸರ ಸ್ನೇಹಿ ಎಲೆಕ್ಟ್ರಿಕಲ್ ವಾಹನ ಬಳಸಿ, ಪರಿಸರ ಸಂರಕ್ಷಿಸಬೇಕು. ಎಲೆಕ್ಟ್ರಾನಿಕ್ ವಾಹನ ಬಳಕೆಯಿಂದ ಶಬ್ಧ ಮಾಲಿನ್ಯ, ವಾಯುಮಾಲಿನ್ಯದಿಂದ ದೂರವಿರಬಹುದು. ವಾಹನದ ತೆರೆಯಲ್ಲಿ ಉಳಿತಾಯವಾಗಲಿದೆ. ಪೆಟ್ರೋಲ್ ಬಂಕ್‌ನಲ್ಲಿ ಸರದಿ ಸಾಲಿನಲ್ಲಿ ನಿಲ್ಲುವುದು ತಪ್ಪುತ್ತದೆ.ಸಂಚಾರವೂ ಸುರಕ್ಷಿತವಾಗಿರಲಿದೆ. ಸಾಧ್ಯವಾದಷ್ಟು ಎಲೆಕ್ಟ್ರಿಕಲ್ ವಾಹನ ಬಳಕೆ ಮಾಡುವಂತೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಮೋಟಾರು ವಾಹನಗಳ ನಿರೀಕ್ಷಕ ಟಿ.ಎಂ.ಪ್ರಕಾಶ್, ಪರಿಸರ ಅಧಿಕಾರಿ ಈ. ಪ್ರಕಾಶ್, ಸರ್ಕಾರಿ ಪಾಲಿಟೆಕ್ನಿಕ್‌ನ ಎಂ.ಸುಧಾ, ನಾಗೇಶ್, ರಾಷ್ಟ್ರೀಯ ಸೇವಾ ಯೋಜನಾಧಿಕಾರಿ ಕೆ.ಜಗದೀಶ್ ಉಪನ್ಯಾಸಕಿ ಸೌಮ್ಯ ಸೇರಿದಂತೆ ಸರ್ಕಾರಿ ಪಾಲಿಟೆಕ್ನಿಕ್ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಇದ್ದರು.

## ಫಾಸ್ಟ್ ನ್ಯೂಸ್

### ಡಿಜಿಟಲ್ ಮಾಧ್ಯಮ ಸ್ಥಾಪನೆಗೆ ಸಹಾಯ ಧನ

» ಚಿತ್ರದುರ್ಗ

2023-24ನೇ ಸಾಲಿಗೆ ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿ ಪಡೆದು ನಿರುದ್ಯೋಗಿಗಳಾಗಿರುವ ಪರಿಶಿಷ್ಟ ಪಂಗಡದ ಯುವಕ ಯುವತಿಯರು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಎಲೆಕ್ಟ್ರಾನಿಕ್ ಹಾಗೂ ಡಿಜಿಟಲ್ ಮಾಧ್ಯಮ ಉದ್ದಿಮೆ ಸ್ಥಾಪಿಸಲು ಗರಿಷ್ಠ 5 ಲಕ್ಷ ಸಹಾಯಧನವನ್ನು ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ ನೀಡಲಾಗುವುದು. ಯೂಟ್ಯೂಬ್ ಚಾನೆಲ್, ಸೋಶಿಯಲ್ ಮೀಡಿಯಾ ನ್ಯೂಸ್ ಪೇಜಸ್, ನ್ಯೂಸ್ ಆನ್ ಲೈನ್ ಬ್ಲಾಗ್, ನ್ಯೂಸ್ ಕಂಟೆಂಟ್ ಕ್ರಿಯೇಷನ್, ವೆಬ್ ಪೇಜಸ್, ಆನ್ ಲೈನ್ ಜರ್ನಲಿಸಂ, ಮೀಡಿಯಾ ರಿಲೇಟೆಡ್ ಟ್ರೈನಿಂಗ್ ಸಂಸ್ಥೆಗಳನ್ನು ಸಹಾಯಧನ ಪಡೆದು ಸ್ಥಾಪಿಸಬಹುದಾಗಿದೆ. ಘಟಕ ವೆಚ್ಚದ ಶೇಕಡ 70 ರಷ್ಟು ಅಥವಾ ಗರಿಷ್ಠ 5 ಲಕ್ಷ ಸಹಾಯಧನವನ್ನು ನಿಗಮದಿಂದ ನೀಡಲಾಗುವುದು. 15 ವರ್ಷಗಳಿಂದ ಕರ್ನಾಟಕದಲ್ಲಿ ನೆಲಸಿರುವ, ಕುಟುಂಬದ ವಾರ್ಷಿಕ ಆದಾಯ ರೂ.1.50 ಲಕ್ಷ ಹೊಂದಿರುವ ಗ್ರಾಮೀಣ ಪ್ರದೇಶ ಹಾಗೂ ರೂ.2 ಲಕ್ಷ ಹೊಂದಿರುವ ನಗರ ಪ್ರದೇಶದ ಅಭ್ಯರ್ಥಿಗಳು ಅರ್ಜಿಸಲ್ಲಿಸಬಹುದು. ವಯೋಮಿತಿ 21 ರಿಂದ 50 ವರ್ಷಗಳ ಒಳಗಿರಬೇಕು. ಅರ್ಜಿದಾರರ ಕುಟುಂಬದ ಸದಸ್ಯರು ಸರ್ಕಾರಿ ಅಥವಾ ಅರೆ ಸರ್ಕಾರಿ ನೌಕರರಾಗಿರಬಾರದು. ಸಫಾಯಿ ಕರ್ಮಚಾರಿ, ಅಲೆಮಾರಿ, ಅರೆ-ಅಲೆಮಾರಿ ಜನಾಂಗದವರ ಮಕ್ಕಳಿಗೆ ಆದ್ಯತೆ ನೀಡಲಾಗುವುದು. ಅರ್ಜಿದಾರರು ಹಾಗೂ ಅವರ ಕುಟುಂಬದವರು ಈ ಹಿಂದೆ ನಿಗಮದಿಂದ ಯಾವುದೇ ಆರ್ಥಿಕ ಸೌಲಭ್ಯ ಪಡೆದಿರಬಾರದು. ಫಲಾಪೇಕ್ಷಿಯು ನಿಗಮದ ಉದ್ಯಮಶೀಲತಾ ಅಭಿವೃದ್ಧಿ ಯೋಜನೆಯಲ್ಲಿ ನಿಯಮಾನುಸಾರ ಆಯ್ಕೆಯಾಗಿ ಸಾಲ ಪಡೆಯಲು ಅರ್ಹರಾಗಿರಬೇಕು. ಸಹಾಯಧನ ಪಡೆದವರು ಕಡ್ಡಾಯವಾಗಿ ತಮ್ಮ ಮಾಧ್ಯಮ ಸಂಸ್ಥೆಯಲ್ಲಿ ಒಬ್ಬ ಪರಿಶಿಷ್ಟ ಪಂಗಡದ ನಿರುದ್ಯೋಗಿ ಯುವಕ ಯುವಕರಿಗೆ ಉದ್ಯೋಗ ನೀಡತಕ್ಕದ್ದು. ಮಾಧ್ಯಮ ಘಟಕ ಸ್ಥಾಪಿಸಿದ ಕುರಿತು ಸ್ಥಳ ಪರಿಶೀಲನೆ ಮಾಡಿ ಜಿಪಿಎಸ್ ಫೋಟೋದೊಂದಿಗೆ ವರದಿಯನ್ನು ನಿಗಮದ ವ್ಯವಸ್ಥಾಪಕ ನಿರ್ದೇಶಕರಿಗೆ ಸಲ್ಲಿಸಲಾಗುವುದು ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

### ಹೊಸದುರ್ಗ: ಹಗಲಿನಲ್ಲಿಯೇ ಕಾರಿನಲ್ಲಿದ್ದ 10.ಲಕ್ಷ ರೂ.ಕದ್ದ ಕಳ್ಳರು




» ಹೊಸದುರ್ಗ

ಪಟ್ಟಣದ ಮಧ್ಯದಲ್ಲಿರುವ ವಿಜಯ ಬ್ಯಾಂಕ್ ಮುಂಭಾಗದಲ್ಲಿಯೇ ಕಾರಿನಲ್ಲಿದ್ದ 10 ಲಕ್ಷ ರೂ. ನಗದು ಹಣವನ್ನು ಕಳ್ಳರು ಹಗಲಿನ ಸಮಯದಲ್ಲಿ ಕದ್ದು ಪರಾರಿಯಾಗಿರುವ ಘಟನೆ ಬುಧವಾರ ಮಧ್ಯಾಹ್ನ ನಡೆದಿದ್ದು, ಜನರು ಬೆಚ್ಚಿ ಬೀಳುವಂತೆ ಮಾಡಿದೆ. ತಾಲೂಕಿನ ಲಕ್ಕಿಹಳ್ಳಿ ಗ್ರಾಮದ ನಿವಾಸಿ ಮುದ್ದಪ್ಪ ಎಂಬುವವರು ದೊಡ್ಡಕಿಟ್ಟದಹಳ್ಳಿ ಗ್ರಾಮದ ಸಂಬಂಧಿಕರಾದ ಮಾವ ರುದ್ರಪ್ಪನೊಂದಿಗೆ ಬುಧವಾರ ಮಧ್ಯಾಹ್ನದ ಸಮಯದಲ್ಲಿ ತಮ್ಮ ಮಾವನರಿಗೆ ಅಪ್ಪರ್ ಭದ್ರಾ ಇಲಾಖೆಯಿಂದ ಜಮೀನಿಗೆ ಅವಾರ್ಡ್ ಆಗಿದ್ದ ಜಮೀನಿನ ಬಾಬ್ತು ಒಟ್ಟು 19.97 ಲಕ್ಷ ರೂ. ಹಣ ಬಂದಿರುತ್ತದೆ. ಈ ಹಣದಲ್ಲಿ 10 ಲಕ್ಷ ರೂ. ನಗದು ಹಣವನ್ನು ಕರ್ನಾಟಕ ಬ್ಯಾಂಕಿನಲ್ಲಿ ಬಿಡಿಸಿಕೊಂಡಿದ್ದಾರೆ. ನಂತರ ಅರ್ಧ ಗಂಟೆ ಸಮಯದ ಬಳಿಕ, ಬಿಡಿಸಿದ ಎಲ್ಲಾ ಹಣವನ್ನು ಬ್ಯಾಗಿನಲ್ಲಿ ಇಟ್ಟುಕೊಂಡು ತಮ್ಮ ಸ್ವಿಫ್ಟ್ ಕಾರಿನ ಡ್ರೈವರ್ ಸೀಟ್ ಪಕ್ಕದಲ್ಲಿ ಇಟ್ಟು ಕಾರ್ ಲಾಕ್ ಮಾಡಿಕೊಂಡು ಪಟ್ಟಣದಲ್ಲಿರುವ ವಿಜಯ ಬ್ಯಾಂಕ್ ಒಳಗಡೆ ಹೋಗಿದ್ದಾರೆ. ಬ್ಯಾಂಕ್ ರಶ್ ಇದ್ದಿದ್ದರಿಂದ 15 ನಿಮಿಷದಲ್ಲಿಯೇ ಬ್ಯಾಂಕ್ ನಿಂದ ಹೊರಬಂದು ನೋಡಿದಾಗ, ಯಾರೋ ಕಳ್ಳರು ಕಾರಿನ ಗ್ಲಾಸನ್ನು ಒಡೆದು ಅದರಲ್ಲಿದ್ದ 10.ಲಕ್ಷ ರೂ. ನಗದು ಹಣವನ್ನು ಬ್ಯಾಗ್ ಸಮೇತ ಕದ್ದು ಪರಾರಿಯಾಗಿದ್ದು, ಈ ಕುರಿತಂತೆ ಹೊಸದುರ್ಗ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಪಟ್ಟಣದ ಮಧ್ಯದಲ್ಲಿಯೇ ಹಗಲಿನ ಸಮಯದಲ್ಲಿ ಕಳ್ಳರು ತಮ್ಮ ಕೈಚಳಕ ತೋರಿಸಿದ್ದು, ಜನರು ಬೆಚ್ಚಿ ಬೀಳುವಂತೆ ಮಾಡಿದೆ. ಕಳ್ಳರ ಬೇಟೆಗಾಗಿ ಖಾಕಿ ಪಡೆ ಕೇಸ್ ದಾಖಲಿಸಿಕೊಂಡು ಕಾರ್ಯಾಚರಣೆ ಮುಂದುವರಿಸಿದೆ.

### ನಿಧಿ ಆಪ್ಕೆ ನಿಕಟ್ 2.00 ಕಾರ್ಯಕ್ರಮ

» ದಾವಣಗೆರೆ

ಸಾಮಾಜಿಕ ಭದ್ರತೆಗಾಗಿ ಉದ್ಯೋಗದಾತರು, ಉದ್ಯೋಗಿಗಳು ಹಾಗೂ ಪಿಂಚಣಿದಾರರ ಕುಂದು ಕೊರತೆಗಳನ್ನು ಪರಿಹರಿಸುವ ಸಲುವಾಗಿ ನವಂಬರ್ 28 ರಂದು ಲೋಕಿಕೆರೆ ರಸ್ತೆಯಲ್ಲಿರುವ ಕೆ.ಐ.ಎ.ಡಿ.ಬಿ ಕೈಗಾರಿಕಾ ಪ್ರದೇಶದ ದಾವಣಗೆರೆ ವೈರ್‌ರೋಪ್ ಇಂಡಸ್ಟ್ರಿ. ಪ್ರೈ. ಲಿಮಿಟೆಡ್ ಸಂಖ್ಯೆ 29 ಇಲ್ಲಿ ನಿಧಿ ಆಪ್ಕೆ ನಿಕಟ್ 2.00 ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಉದ್ಯೋಗದಾತರು ಹಾಗೂ ಉದ್ಯೋಗಿಗಳಿಗೆ ಬೆಳಗ್ಗೆ 10 ರಿಂದ ಮಧ್ಯಾಹ್ನ 1 ರವರೆಗೆ ಮತ್ತು ಪಿಂಚಣಿದಾರರಿಗೆ ಮಧ್ಯಾಹ್ನ 2.30 ರಿಂದ ಸಂಜೆ 4ರ ವರೆಗೆ ಕಾರ್ಯಕ್ರಮ ನಡೆಯಲಿದೆ.

# ಬೆಳೆ ಹಾನಿ ಪರಿಶೀಲಿಸಿದ ಚಲುವರಾಯಸ್ವಾಮಿ

» ದಾವಣಗೆರೆ

ರಾಜ್ಯ ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಅವರು ಬುಧವಾರ ಜಿಲ್ಲೆಯ ಜಗಳೂರು ತಾಲ್ಲೂಕಿನ ವಿವಿಧೆಡೆ ರೈತರ ಜಮೀನುಗಳಿಗೆ ಭೇಟಿ ನೀಡಿ ಮಳೆ ಇಲ್ಲದೆ ಅನಾವೃಷ್ಟಿಯಿಂದ ಹಾಳಾಗಿರುವ ಬೆಳೆ ಹಾನಿ ಪರಿಶೀಲನೆ ನಡೆಸಿದರು.

ಜಗಳೂರು ತಾಲ್ಲೂಕಿನ ಬಿಳಿಚೋಡು ಹಾಗೂ ದಾವಣಗೆರೆ ತಾ. ಕಂದನಕೋವಿ ಗ್ರಾಮದ ರೈತರ ಮೆಕ್ಕೆಜೋಳ ಬೆಳೆ ವೀಕ್ಷಣೆ ಮಾಡಿ, ಬೆಳೆ ಹಾನಿ ಕುರಿತು ಅಧಿಕಾರಿಗಳು ಹಾಗೂ ರೈತರಿಂದ ಮಾಹಿತಿ ಪಡೆದುಕೊಂಡರು.

ಜಗಳೂರು ತಾಲ್ಲೂಕಿನಲ್ಲಿ ಹೆಚ್ಚಾಗಿ ಮೆಕ್ಕೆಜೋಳ ಬೆಳೆಯಲಾಗುತ್ತಿದ್ದು, ಮುಂಗಾರು ಮಳೆ ಕೊರತೆಯಿಂದಾಗಿ ಮೆಕ್ಕೆಜೋಳ ಬೆಳೆ ಸಂಪೂರ್ಣ ಹಾಳಾಗಿದೆ. ಜಾನುವಾರುಗಳಿಗೂ ಸಹ ಮೇವು ಸಿಗುತ್ತಿಲ್ಲ ಎಂದು ರೈತರು ಈ ವೇಳೆ ಅಳಲು ತೋಡಿಕೊಂಡರು.

ವಿಮಾ ಕಂಪನಿಗಳು ರೈತರಿಗೆ ಬೆಳೆವಿಮೆ ಪರಿಹಾರ ನೀಡದೇ ಮೋಸ ಮಾಡುತ್ತಿದ್ದಾರೆ. ಈ ಕುರಿತು ಅಗತ್ಯ






ಕ್ರಮಕೈಗೊಳ್ಳಬೇಕು ಎಂದು ಕೃಷಿ ಸಚಿವರಿಗೆ ಬಿಳಿಚೋಡು ಗ್ರಾಮದ ರೈತರು ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಕೃಷಿ ಸಚಿವರು, ಬೆಳೆವಿಮೆ ಪರಿಹಾರಕ್ಕೆ ಸಂಬಂಧಪಟ್ಟಂತೆ ಕಳೆದ ವರ್ಷ ಸಾಕಷ್ಟು ದೂರುಗಳು, ಸಮಸ್ಯೆಗಳಿವೆ. ಆದರೆ ಈ ವರ್ಷದಿಂದ ಬೆಳೆ ಪರಿಹಾರಕ್ಕೆ ಯಾವುದೇ ಸಮಸ್ಯೆ ಇಲ್ಲ. ಈ ಕುರಿತು ಈಗಾಗಲೇ ಸಭೆ ನಡೆಸಲಾಗಿದ್ದು, ರೈತರಿಗೆ ತೊಂದರೆಯಾಗದಂತೆ ಬೆಳೆವಿಮೆ ಪರಿಹಾರಕ್ಕೆ ಕ್ರಮವಹಿಸಲಾಗಿದೆ ಎಂದು ಹೇಳಿದ ಅವರು, ಫ್ರೂಟ್ಸ್ ಐಡಿಯಲ್ಲಿ ( ಈಖಆ) ರೈತರು ತಮ್ಮ ಹೆಸರಿನಲ್ಲಿರುವ ಎಲ್ಲ ಜಮೀನನ್ನು ನೋಂದಣಿ ಮಾಡಿಸಬೇಕು.ಇದರಿಂದ ಬರ ಪರಿಹಾರಕ್ಕೆ ಅನುಕೂಲವಾಗಲಿದೆ ಎಂದು ರೈತರಿಗೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ, ಚನ್ನಗಿರಿ ಶಾಸಕರಾದ ಬಸವರಾಜ್ ವಿ.ಶಿವಗಂಗ, ಜಿಲ್ಲಾಧಿಕಾರಿ ಎಂ.ವಿ.ವೆಂಕಟೇಶ್, ಉಪವಿಭಾಗಾಧಿಕಾರಿ ದುರ್ಗಶ್ರೀ, ಜಂಟಿ ಕೃಷಿ ನಿರ್ದೇಶಕ ಶ್ರೀನಿವಾಸ್ ಚಿಂತಾಲ್, ಕೃಷಿ ಇಲಾಖೆ ಅಧಿಕಾರಿಗಳು, ರೈತರು ಇದ್ದರು.

# ಅಶೋಕ್ ನಮ್ಮನ್ನ ಭಸ್ಮ ಮಾಡುವ ಶಕ್ತಿ ಪಡೆದಿದ್ದಾರೆ: ಚೆಲುವರಾಯಸ್ವಾಮಿ ಲೇವಡಿ

» ಚಿತ್ರದುರ್ಗ

ಕಾಂಗ್ರೆಸ್‌ನವರು ಬಚ್ಚಾಗಳು ಎಂಬ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ನಮ್ಮನ್ನ ಭಸ್ಮ ಮಾಡುವ ಶಿವ ಶಕ್ತಿ ಪಡೆದಿದ್ದಾರೆ ಎಂದು ಕೃಷಿ ಸಚಿವ ಚೆಲುವರಾಯ ಸ್ವಾಮಿ ಲೇವಡಿ ಮಾಡಿದ್ದಾರೆ.

ಚಿತ್ರದುರ್ಗದಲ್ಲಿ ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಗೆ ಧ್ವನಿ ಎತ್ತಲು ಏನೂ ಸಿಗುತ್ತಿಲ್ಲ, ಹಾಗಾಗಿ ಏನೇನೋ ಹುಡುಕುತ್ತಾ, ಮನಬಂದಂತೆ ಮಾತನಾಡುತ್ತಿದ್ದಾರೆ. ಬೇರೆಯವರ ಬಗ್ಗೆ ಮಾತನಾಡುವ ಮೊದಲು ತಮ್ಮಲ್ಲಿರುವ ಹುಳುಕುಗಳನ್ನು ಮುಚ್ಚಿಕೊಳ್ಳಬೇಕು. ವಿರೋಧ ಪಕ್ಷ ನಾಯಕ, ಬಿಜೆಪಿ ಪಕ್ಷದ ಅಧ್ಯಕ್ಷ ಆಯ್ಕೆ ಈಗಷ್ಟೇ ಆಗಿದ್ದು, ಯತ್ನಾಳ್ ಹೊಡೆತ ಯಡಿಯೂರಪ್ಪ, ಬೊಮ್ಮಾಯಿಗೆ ತಡೆಯಲು ಆಗುತ್ತಿಲ್ಲ. ಇವರಿಬ್ಬರು ಯಾವ ರೀತಿಯಲ್ಲಿ ತಡೆದುಕೊಳ್ಳುತ್ತಾರೆ ನೋಡೋಣಾ ಎಂದರು.

ಬಿಜೆಪಿ ಜನರಿಗೆ ಒಕ ಎಲೆಕ್ಷನ್ ಇರುವುದರಿಂದ ಸುಳ್ಳು ಹೇಳುತ್ತಿದ್ದಾರೆ. ರಾಜ್ಯದಲ್ಲಿ ಆರ್ ಎಸ್ ಎಸ್ ಬ್ಯಾನ್ ಮಾಡುವ ಕುರಿತು ನಾವು ಎಲ್ಲೂ ಕೂಡ ಹೇಳಿಲ್ಲ. ಸಾರ್ವಜನಿಕ ಹಾನಿ ಮಾಡುವ ಸಂಘಟನೆ ಕ್ರಮ ಅಂತ ಅಷ್ಟೇ ಹೇಳಿದ್ದೇವೆ. ಸಂಘ ಸಂಸ್ಥೆಗಳು ಜನರ ಹಿತದೃಷ್ಟಿಯಿಂದ ಕೆಲಸ ಮಾಡಿದರೆ ಹಾನಿಯಲ್ಲ. ಆದರೆ ಸಾರ್ವಜನಿಕ ಸಮಸ್ಯೆಗಳು ಆಗಬಾರದು ಅಷ್ಟೇ ಎಂದು ಹೇಳಿದರು.ಬರ ಪರಿಹಾರದ ಎಲ್ಲಾ ಪ್ರಕ್ರಿಯೆ ಮುಗಿದು ಘೋಷಣೆ ಹಂತದಲ್ಲಿದೆ. ಪರಿಹಾರ ಘೋಷಣೆ ಮಾಡುವ ಬಗ್ಗೆ ಕೇಂದ್ರಕ್ಕೆ ಒತ್ತಡ ಹಾಕಿದ್ದೇವೆ. ನಾನು ಕೃಷ್ಣಬೈರೇಗೌಡ, ಪ್ರಿಯಾಂಕ್ ಖರ್ಗೆ ದೆಹಲಿಗೆ ಮಂತ್ರಿಗಳ ಭೇಟಿಗೆ ಹೋಗಿದ್ದೆವು



ಆದರೆ ಮಂತ್ರಿಗಳ ಸಿಗಲಿಲ್ಲ. ನಮ್ಮ ಮನವಿಗಳನ್ನು ಕೇಂದ್ರಕ್ಕೆ ನೀಡಿದ್ದೇವೆ. ಆದರೆ ನಮ್ಮ ಮನವಿಗೆ ಕೇಂದ್ರ ಸರ್ಕಾರದ ಉತ್ತರ ಇನ್ನೂ ಸಿಕ್ಕಿಲ್ಲ ಎಂದು ಹೇಳಿದ ಅವರು, ಹಣಕಾಸು ಸಚಿವರು ನಾಳೆ ಭೇಟಿಗೆ ಅವಕಾಶ ನೀಡಿದ್ದಾರೆ. ನಾನು ಕೃಷ್ಣಬೈರೇಗೌಡ ದೆಹಲಿಗೆ ಹೋಗುತ್ತೇವೆ. 2-3 ದಿನಗಳ ಬಳಿಕ ಅಂತಿಮ ನಿರ್ಧಾರವಾಗುತ್ತದೆ ಎಂದರು.

ಕರ್ನಾಟಕದ ಬಗ್ಗೆ ಕೇಂದ್ರ ಸರ್ಕಾರ ದ್ವೇಷದ ರಾಜಕೀಯ ಮಾಡುತ್ತಿದ್ದಾರೆ. 26 ಸಂಸದರನ್ನು ಗೆಲ್ಲಿಸಿರುವ ಆ ಪ್ರಜ್ಞೆ ಅವರಿಗಿಲ್ಲ. ಪ್ರಧಾನಿ ಮೋದಿಗೆ ರಾಜ್ಯ 2 ಬಾರಿ ಬೆಂಬಲ ಕೊಟ್ಟಿದೆ. ಆದರೆ ರಾಜ್ಯದ ಯಾವುದೇ ವಿಚಾರಗಳ ಬಗ್ಗೆ ಗಮನ ನೀಡುತ್ತಿಲ್ಲ ಎಂದು ಆರೋಪಿಸಿ ರಾಜ್ಯದ ವಿಚಾರಗಳಲ್ಲು ಯಾವುದೇ ಗಮನ ನೀಡುತ್ತಿಲ್ಲ. 50 ಸಾವಿರ ಕೋಟಿ ಮಾತ್ರ ನಮಗೆ ತಲುಪುತ್ತಿದೆ. ಎಲೆಕ್ಷನ್ ಟೈಂ ಮಾತ್ರ ರಾಜಕಾರಣ ಇರುತ್ತದೆ. ರಾಜ್ಯದ ಜನರ ಬಗ್ಗೆ ಸೌಲಭ್ಯಗಳನ್ನು ಸ್ಪಂಧಿಸುತ್ತಿಲ್ಲ. ಗ್ಯಾರಂಟಿ ಯೋಜನೆಗಳಿಂದ ಹತಾಷೆಯಿಂದ ಹೇಳಿಕೆ ನೀಡುತ್ತಿದ್ದಾರೆ ಎಂಧರು.

ಯಾವುದೇ ಕಾರಣಕ್ಕೂ ನಮ್ಮ ಸರ್ಕಾರ ಕಲ್ಲಿದ್ದಲು ವಿಚಾರದಲ್ಲಿ ತಪ್ಪು ಮಾಡಿಲ್ಲ. ತಪ್ಪು ಮಾಡಿದರೆ ನಿರ್ಧಾಕ್ಷಣ್ಯ ಕ್ರಮವಾಗುತ್ತದೆ. ಜಾತಿ ಜನಗಣತಿ ವಿಚಾರದಲ್ಲಿ ಕೆಲವು ಮನೆಗಳಿಗೆ ಭೇಟಿ ನೀಡಿಲ್ಲ ಎಂಬ ಆತಂಕ ಇದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಕುರಿತು ಕ್ಯಾಬಿನೆಟ್‌ನಲ್ಲಿ ಚರ್ಚೆ ಎಂದಿದ್ದಾರೆ. ನಿಗಮ ಮಂಡಳಿ ನೇಮಕಾತಿ ಯಾವುದೇ ಅಸಮಾಧಾನ ಇಲ್ಲ. ಬಸವರಾಯರೆಡ್ಡಿ ನಮ್ಮ ಪಕ್ಷದಲ್ಲಿ ಹಿರಿಯರಿದ್ದಾರೆ. ಅವರು ಮಂತ್ರಿ ಆಗಬೇಕಾದವರು. ಅವರನ್ನ ಮುಂದೆ ನಮ್ಮ ಪಕ್ಷ ಪರಿಸಣಿಸಲಿದೆ ಎಂದು ಹೇಳಿದ ಅವರು ಕಳೆದ ಆರು ತಿಂಗಳಿಂದ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಮಾತನಾಡುತ್ತಿದ್ದಾರೆ. ಅಧಿವೇಶನದಲ್ಲಿ ಏನೂ ಮಾತನಾಡುತ್ತಾರೆ ಎಂಬುದನ್ನೂ ನೋಡೋಣ ಎಂದು ಅಪಹಾಸ್ಯ ಮಾಡಿದರು.ಈ ವೇಳೆ ಶಾಸಕ ಕೆ.ಸಿ.ವಿರೇಂದ್ರ ಪಪ್ಪಿ ಸೇರಿದಂತೆ ಇತರರು ಹಾಜರಿದ್ದರು.

# ಪತ್ನಿಗೆ ಮಚ್ಚಿನಿಂದ ಹಲ್ಲೆ ಮಾಡಿ ಪತಿ



» ಚಳ್ಳಕೆರೆ



ತನ್ನ ಹೆಂಡತಿಯ ಮೇಲೆ ಗಂಡ ಮಾರಾಣಾಂತಿಕ ಹಲ್ಲೆ ನಡೆಸಿದ ಘಟನೆ ಬೆಳ್ಳಂ ಬೆಳಗ್ಗೆ ಚಳ್ಳಕೆರೆ ನಗರದ ಜನತೆಯನ್ನು ಬೆಚ್ಚಿಬೀಳಿಸುವಂತೆ ಮಾಡಿದೆ. ನಗರದ ಜನನಿಬಿಡ ಪ್ರದೇಶ, ಅರಮನೆ ಹೋಟೆಲ್ ಮುಂಭಾಗದಲ್ಲಿ ಘಟನೆ ನಡರದಿದ್ದು ಹೆಂಡತಿ ಹೆಗ್ಗೇರೆ ಗ್ರಾಮದ ಆಶಾ(23) ನ್ನು ಚನ್ನಮ್ಮನಾಗತಿಹಳ್ಳಿ ಗ್ರಾಮದ ಕುಮಾರಸ್ವಾಮಿ ಸಾರಿಗೆ ಬಸ್ ನಿಲ್ದಾಣದಲ್ಲಿ ಹೆಂಡತಿ ಬರುವುದನ್ನೇ ಕಾಯಿತ್ತಿದ್ದು ಅರಮನೆ ಹೋಟೆಲ್ ಬಳಿ ಬಂದ ತಕ್ಷಣ ಹೆಂಡತಿ ಮೇಲೆ ಮೊಚ್ಚಿನಿಂದ ಹಲ್ಲೆ ಮಾಡಿದ್ದಾನೆ. ತಲೆ ಭಾಗ ಕೈ ನ ಬೆರಳುಗಳು ತೀವ್ರ ಗಾಯಗೊಂಡು ರಕ್ತದ ಮಡುವಿನಲ್ಲಿ ಬಿದ್ದಿದ್ದ ಆಶಾಳನ್ನು ಪೋಲಿಸರು ಆಸ್ಪತ್ರೆಗೆ ದಾಖಲಿಸಿ ಹೆಚ್ಚಿನ ಚಿಕಿತ್ಸೆಗೆ ಜಿಲ್ಲಾಸ್ಪತ್ರೆಗೆ ಸಾಗಿಸಲಾಗಿದೆ.

ಮಚ್ಚಿನಿಂದ ಹಲ್ಲೆ ಮಾಡಿ ಪತಿ ಕುಮಾರಸ್ವಾಮಿಯನ್ನು ಡಿ ವೈಎಸ್ಪಿ ರಾಜಣ್ಣ.ಪಿಐ ದೇಸಾಯಿ ಘಟನೆ ಬಗ್ಗೆ ತನಿಖೆಕೊಂಡಿದ್ದಾರೆ.

ಹೆಚ್ಚಿನ ಮಾಹಿತಿ ಪೋಲಿಸ್ ತನಿಖೆಯಿಂದ ಬಯಲಾಗ ಬೇಕಿದೆ. ಹಲ್ಲೆ ವಿಷಯದ ಸುದ್ದಿ ಹರಡುತ್ತಿದ್ದಂತೆ ನಗರ ಮತ್ತು ಸುತ್ತಲಿನ ಹಳ್ಳಿಗಳ ಭಾಗದಿಂದ ಹಲ್ಲೆಗೊಳಗಾದ ಮಹಿಳೆಯನ್ನು ನೋಡಲು ಜನರು ಸಾರ್ವಜನಿಕ ಆಸ್ಪತ್ರೆ ಮುಂದೆ ಜಮಾಯಿಸಿದ್ದರು .



ಮಹದೇಶ್ವರಸ್ವಾಮಿ ದೇವಸ್ಥಾನದ ಜೀರ್ಣೋದ್ದಾರಕ್ಕೆ ಬಿಡುಗಡೆಯಾದ ಒಂದುವರೆ ಲಕ್ಷ ರೂ.ಗಳ ಡಿ.ಡಿ. ವಿತರಣೆ.



ಜಾನಪದ ಜಾಗೃತಿ ಪರಿಷತ್ ವತಿಯಿಂದ ನಗರಸಭೆ ಪೌರಾಯುಕ್ತರಿಗೆ ಸನ್ಮಾನ.

## ಪ್ರಮುಖ ಸುದ್ದಿ

# ಎಲೆಮರೆಯ ಕಾಯಿಯಂತಿರುವ ಸಾಹಿತಿಗಳನ್ನು ಗುರುತಿಸಿ

» ಚಿತ್ರದುರ್ಗ

ಎಲೆಮರೆಯ ಕಾಯಿಯಂತಿರುವ ಸಾಹಿತಿಗಳು ಕಲಾವಿದರನ್ನು ಗುರುತಿಸಿ ಪ್ರೋತ್ಸಾಹಿಸುವ ಕೆಲಸವಾಗಬೇಕು ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷ ಡಾ.ದೊಡ್ಡಮಲ್ಲಯ್ಯ ಹೇಳಿದರು.

ಕರ್ನಾಟಕ ರತ್ನ ಡಾ.ರಾಜ್‌ಕುಮಾರ್ ಸಾಂಸ್ಕೃತಿಕ ಕಲಾ ಪರಿಷತ್ ರಾಜ್ಯ ಶಾಖೆ ಉದ್ಘಾಟನೆ, ಕನ್ನಡ ರಾಜ್ಯೋತ್ಸವದ ಅಂಗವಾಗಿ ಐ.ಎಂ.ಎ.ಹಾಲ್‌ನಲ್ಲಿ ನಡೆದ ರಾಜ್ಯ ಮಟ್ಟದ ಕವಿಗೋಷ್ಠಿ, ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದವರಿಗೆ ಹಮ್ಮಿಕೊಳ್ಳಲಾಗಿದ್ದ ಸನ್ಮಾನ ಸಮಾರಂಭ, ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕನ್ನಡದಮೇರುನಟಡಾ.ರಾಜ್‌ಕುಮಾರ್ ಹೆಸರಿನಲ್ಲಿ ಸಾಂಸ್ಕೃತಿಕ ಕಲಾ ಪರಿಷತ್ ಚಿತ್ರದುರ್ಗದಲ್ಲಿ ಹುಟ್ಟಿಕೊಂಡಿರುವುದು ಸಂತಸದ ಸಂಗತಿ. ಪದ್ಮಭೂಷಣ ಕನ್ನಡದ ವರನಟ ಡಾ.ರಾಜ್‌ಕುಮಾರ್ ಕನ್ನಡ ನಾಡು ನುಡಿ ನೆಲ ಜಲಕ್ಕಾಗಿ ಸದಾ ಮಿಡಿಯುತ್ತಿದ್ದರು. ಗೋಕಾಕ್ ಚಳುವಳಿಯಲ್ಲಿ ರಾಜ್ಯಾದ್ಯಂತ ಸುತ್ತಾಡಿ ಅಭಿಮಾನಿಗಳಲ್ಲಿ ಸಂಚಲನ ಮೂಡಿಸಿದ್ದರು ಎಂದು ಶ್ಲಾಘಿಸಿದರು.



ಅರಣ್ಯ ಮಹಾವಿದ್ಯಾಲಯ ಶಿರಸಿಯ ನಿವೃತ್ತ ಡೀನ್ ಡಾ.ಹೆಚ್.ಶಿವಣ್ಣ ಮಾತನಾಡಿ ಚಿತ್ರದುರ್ಗ ಕಾದಂಬರಿಕಾರರು, ಕವಿಗಳು, ಸಾಹಿತಿಗಳು, ಕಲಾವಿದರ ತಾಣವಾಗಿದೆ. ಅನೇಕ ಸಾಹಿತಿಗಳು ಕಲಾವಿದರು ಪ್ರಶಸ್ತಿ ಪುರಸ್ಕಾರಗಳನ್ನು ಕಾಣದೆ ಮೂಲೆ ಗುಂಪಾಗಿದ್ದಾರೆ. ಅಂತಹವರನ್ನು ಗುರುತಿಸಿ ಪ್ರೋತ್ಸಾಹಿಸಿ ಬೆಳಕಿಗೆ ತರುವ ಕೆಲಸವನ್ನು ಕರ್ನಾಟಕ ರತ್ನ ಡಾ.ರಾಜ್‌ಕುಮಾರ್ ಸಾಂಸ್ಕೃತಿಕ ಕಲಾ ಪರಿಷತ್ ಮಾಡುತ್ತಿರುವುದು ನಿಜಕ್ಕೂ ಸಂತೋಷದ ಸಂಗತಿ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಂ.ವೀರೇಶ್ ಮಾತನಾಡುತ್ತ ಜನಪದ ಕಲೆ ಜನ್ಮತಾಳಿದ್ದು, ಗ್ರಾಮೀಣ ಭಾಗದಿಂದ ಒಬ್ಬರ ಬಾಯಿಂದ ಮತ್ತೊಬ್ಬರ ಬಾಯಿಗೆ ಹರಡುವುದು ಇದರ ವಿಶೇಷ. ಸೋಬಾನೆ, ಭಜನೆ, ಕೋಲಾಟ, ತಂಡದವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿರುವುದು ನಿಜಕ್ಕೂ ಮನಸ್ಸಿಗೆ ಖುಷಿ ತಂದಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ರತ್ನ ಡಾ.ರಾಜ್‌ಕುಮಾರ್ ಸಾಂಸ್ಕೃತಿಕ ಕಲಾ ಪರಿಷತ್ ರಾಜ್ಯಾಧ್ಯಕ್ಷ ಕೆ.ಪರಶುರಾಮ್ ಗೊರಪ್ಪರ್ ಮಾತನಾಡಿ ನಾವುಗಳು ಸದಾ ನಾಡಿನ ಸಾಹಿತಿ, ಕಲಾವಿದರ ಜೊತೆಯಿರುತ್ತೇವೆ. ಕಿರಿಯರನ್ನು ಪ್ರೋತ್ಸಾಹಿಸಿ ಹಿರಿಯರನ್ನು ಗೌರವಿಸುವುದು ನಮ್ಮ ಪರಿಷತ್‌ನ ಉದ್ದೇಶ. ಮುಂದಿನ ವರ್ಷ ಏಪ್ರಿಲ್‌ನಲ್ಲಿ ರಾಜ್ಯ ಮಟ್ಟದ ಕಲಾವಿದರ ಸಮ್ಮೇಳನವನ್ನು ಚಿತ್ರದುರ್ಗದಲ್ಲಿ ನಡೆಸಲಾಗುತ್ತದೆ. ಇದಕ್ಕೆ ಎಲ್ಲರ ಸಹಕಾರ ಮುಖ್ಯ ಎಂದು ಕೋರಿದರು.

ಸಮತಾ ಸಾಹಿತ್ಯ ವೇದಿಕೆಯ ಅಧ್ಯಕ್ಷ ಓ.ವೆಂಕಟೇಶ್‌ನಾಯ್ಕ, ಡಯಟ್‌ನ ಹಿರಿಯ ಉಪನ್ಯಾಸಕ ರಾಘವೇಂದ್ರ, ಕರ್ನಾಟಕ ರತ್ನ ಡಾ.ರಾಜ್‌ಕುಮಾರ್ ಸಾಂಸ್ಕೃತಿಕ ಕಲಾ ಪರಿಷತ್‌ನ ಗೌರವಾಧ್ಯಕ್ಷ ಕೆ.ಬಿ.ಕೃಷ್ಣಪ್ಪ, ಬಡಾವಣೆ ಪೊಲೀಸ್ ಠಾಣೆ ಸಬ್‌ಇನ್ಸ್‌ಪೆಕ್ಟರ್ ಜಿ.ಯಶೋಧಮ್ಮ, ಕಿರುತೆರೆ ನಟಿ ಬೆಂಗಳೂರಿನ ಇಂದ್ರಸುಧಾ, ಶಂಕರ್‌ನಾಗ್ ಅಭಿಮಾನಿಗಳ ಕಲಾವೇದಿಕೆ ಅಧ್ಯಕ್ಷ ಹೆಚ್.ಸಿ.ದಿವುಶಂಕರ್, ರಾಜ್ಯ ಪ್ರಧಾನ ಕಾರ್ಯದರ್ಶಿ ಮಲ್ಲೇಶ್, ಶಿವಕುಮಾರಸ್ವಾಮಿ, ಹಾಸ್ಯಕವಿ ಪಿ.ಜಗನ್ನಾಥ, ಸಿ.ಆರ್.ಪುಟ್ಟರಾಜು, ಇನ್ನು ಅನೇಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ನಾಮ ನಿರ್ದೇಶಿತ ಸದಸ್ಯರ ಆಯ್ಕೆಗೆ ಅರ್ಜಿ

» **ದಾವಣಗೆರೆ**

ಕರ್ನಾಟಕ ವಿಶ್ವಕರ್ಮ ಸಮುದಾಯ ಅಭಿವೃದ್ಧಿ ನಿಗಮದಿಂದ ಸಾಲ ಸೌಲಭ್ಯಕ್ಕಾಗಿ ಫಲಾನುಭವಿಗಳನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅಧ್ಯಕ್ಷತೆಯಲ್ಲಿ ಆಯ್ಕೆ ಮಾಡಲಾಗುತ್ತಿದ್ದು, ಆಯ್ಕೆ ಸಮಿತಿ ಸಭೆಯಲ್ಲಿ ಒಬ್ಬ ನಾಮನಿರ್ದೇಶಕ ಸದಸ್ಯರನ್ನು ಆಯ್ಕೆ ಮಾಡಲು ವಿಶ್ವಕರ್ಮ ಸಮುದಾಯದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಎರಡು ವರ್ಷಗಳವರೆಗೆ ಅಧಿಕಾರೇತರ ನಾಮನಿರ್ದೇಶಕ ಸದಸ್ಯರನ್ನು ನೇಮಕ ಮಾಡಿಕೊಳ್ಳಲಾಗುತ್ತಿದ್ದು, ವಿಶ್ವಕರ್ಮ ಸಮುದಾಯದ ಜನಾಂಗದವರ ಪ್ರತಿನಿಧಿತ್ವ ವಹಿಸಿ ಸಮಾಜಮುಖಿ ಕೆಲಸ ನಿರ್ವಹಿಸಿರುವ ಅಭ್ಯರ್ಥಿಗಳು ನಾಮ ನಿರ್ದೇಶಕ ಸದಸ್ಯತ್ವಕ್ಕೆ ಅರ್ಜಿ ಸಲ್ಲಿಸಬಹುದು. ಅರ್ಹರು ಡಿಸೆಂಬರ್ 4 ರೊಳಗಾಗಿ ಜಿಲ್ಲಾ ವಿಶ್ವಕರ್ಮ ಸಮುದಾಯ ಅಭಿವೃದ್ಧಿ ನಿಗಮದಲ್ಲಿ ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬೇಕು ಎಂದು ಜಿಲ್ಲಾ ವಿಶ್ವಕರ್ಮ ಸಮುದಾಯ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

### ವಿದ್ಯುತ್ ವ್ಯತ್ಯಯ

» **ದಾವಣಗೆರೆ**

ಯರಗುಂಟೆ ವಿದ್ಯುತ್ ಉಪ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ನವಂಬರ್ 23 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.ಯರಗುಂಟೆ ಫೀಡರ್ ವ್ಯಾಪ್ತಿಯ ದೇವರಾಜ್ ಅರಸ್ ಬಡಾವಣೆ ಎ, ಬಿ ಮತ್ತು ಸಿ ಬ್ಲಾಕ್, ಕರೂರು ಇಂಡಸ್ಟ್ರಿಯಲ್ ಏರಿಯಾ, ಡಿ.ಸಿ. ಕಛೇರಿ, ಜಿ.ಎಂ.ಐ.ಟಿ., ಶಂಕರ್ ವಿಹಾರ ಬಡಾವಣೆ, ಶಾಂತಿ ನಗರ, ರಶ್ಮೀ, ಹರಿಹರ ರಸ್ತೆ, ವಿಜಯ ನಗರ, ಅಶೋಕ ನಗರ, ಆರ್.ಟಿ.ಓ. ಕಛೇರಿ, ಎಸ್.ಪಿ. ಕಛೇರಿ, ರಿಂಗ್ ರಸ್ತೆ, ಶಿಬಾರ, ಎಸ್.ಎಂ.ಕೆ. ನಗರ, ಹಾಗೂ ಚಿತ್ತನಹಳ್ಳಿ, ಕಕ್ಕರಗೊಳ್ಳ, ಆವರಗೊಳ್ಳ, ನೀಲನಹಳ್ಳಿ, ದೇವರಹಟ್ಟಿ, ದೊಡ್ಡಬಾತಿ, ಹಳೇಬಾತಿ, ನಾರಾಯಣ ಕ್ಯಾಂಪ್, ಯರಗುಂಟೆ, ಕೋಡಿಹಳ್ಳಿ ಗ್ರಾಮಗಳು ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

### ಜಿಲ್ಲಾ ಮಟ್ಟದ ಯುವಜನೋತ್ಸವ

» **ದಾವಣಗೆರೆ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ನೆಹರು ಯುವ ಕೇಂದ್ರ, ವಿಶ್ವವಿದ್ಯಾನಿಲಯ, ದೃಶ್ಯಕಲಾ ಮಹಾವಿದ್ಯಾಲಯ, ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ದಾವಣಗೆರೆ ಇವರುಗಳ ಸಂಯುಕ್ತಾಶ್ರಯದಲ್ಲಿ ಪ್ರಸಕ್ತ ಸಾಲಿನ ದಾವಣಗೆರೆ ಜಿಲ್ಲಾ ಮಟ್ಟದ ಯುವ ಜನೋತ್ಸವ ಆಯ್ಕೆ ಪ್ರಕ್ರಿಯೆಯನ್ನು ನವಂಬರ್ 29 ರಂದು ನಗರದ ವಿದ್ಯಾನಗರದಲ್ಲಿರುವ ವಿಶ್ವವಿದ್ಯಾನಿಲಯ ದೃಶ್ಯಕಲಾ ಮಹಾವಿದ್ಯಾಲಯ, ಇಲ್ಲಿ ಆಯೋಜಿಸಲಾಗಿದೆ. ಯುವಜನೋತ್ಸವ ಆಯ್ಕೆ ಸ್ಪರ್ಧೆಗಳ ಕಾರ್ಯಕ್ರಮದಲ್ಲಿ ಸ್ಪರ್ಧೆಗಳು ನಡೆಯಲಿದ್ದು, 15 ರಿಂದ 29 ವರ್ಷ ವಯೋಮಿತಿಯೊಳಗಿನ ಎಲ್ಲಾ ಯುವಜನರು ಭಾಗವಹಿಸಬಹುದಾಗಿದೆ. ಭಾಗವಹಿಸುವ ಸ್ಪರ್ಧಾಳುಗಳು ಕಡ್ಡಾಯವಾಗಿ ಎಸ್.ಎಸ್.ಎಲ್.ಸಿ.ಅಂಕಪಟ್ಟಿ ನಕಲು ಮತ್ತು ಆಧಾರ್‌ಕಾರ್ಡ್‌ನ ನಕಲು ಪ್ರತಿ, ಜನನ ಪ್ರಮಾಣ ಪತ್ರ ತರತಕ್ಕದ್ದು. ಆಯ್ಕೆಯಾದವರು ರಾಜ್ಯಮಟ್ಟದ ಯುವಜನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಲು ಅವಕಾಶವಿರುತ್ತದೆ. ಹೆಚ್ಚಿನ ವಿವರಗಳಿಗಾಗಿ ಸಹಾಯಕ ನಿರ್ದೇಶಕರ ಕಛೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಅಥವಾ ದೂ.ಸಂ: 08192-237480 ಸಂಪರ್ಕಿಸಲು ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಜಯಲಕ್ಷ್ಮೀಬಾಯಿ ತಿಳಿಸಿದ್ದಾರೆ.

### ಎಫ್‌ಐಡಿ ಕಡ್ಡಾಯ

» **ಹೊಸದುರ್ಗ**

ತಾಲ್ಲೂಕಿನಲ್ಲಿ 135841 ರಿ.ಸ.ನಂ ತಾಕುಗಳಿದ್ದು ಅದರಲ್ಲಿ 92955 ತಾಕುಗಳನ್ನು ಮಾತ್ರ ಪ್ರೂಟ್ಸ್ ತಂತ್ರಾಂಶದಲ್ಲಿ ನೋಂದಣಿ ಮಾಡಿಸಲಾಗಿದ್ದು ಉಳಿದ 42886 ಸರ್ವೆನಂಬರ್‌ಗಳನ್ನು ಎಫ್‌ಐಡಿ ನೋಂದಣಿ ಮಾಡಿಸಲು ಬಾಕಿ ಇದ್ದು, ಎಲ್ಲರೂ ಕಡ್ಡಾಯವಾಗಿ ನವಂಬರ್ 30 ರೊಳಗೆ ಎಫ್‌ಐಡಿ ನೋಂದಣೀ ಮಾಡಿಸಬೇಕು ಎಂದು ಸಹಾಯಕ ಕೃಷಿ ನಿರ್ದೇಶಕ ಈಶ ಸಿ.ಎಸ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ರೈತರು ಎಫ್‌ಐಡಿ ಮಾಡಿಸದಿದ್ದರೆ ಅಥವಾ ಬಾಕಿ ಇರುವ ಸರ್ವೆ ನಂಬರ್‌ಗಳನ್ನು ತಮ್ಮ ಎಫ್‌ಐಡಿ ಗೆ ಸೇರಿಸದಿದ್ದರೆ, ಬೆಳೆ ಪರಿಹಾರ ಸೇರಿ ಯಾವುದೇ ಸರ್ಕಾರಿ ಸೌಲಭ್ಯಗಳು ಸಿಗುವುದಿಲ್ಲ. ರೈತರು ಜಮೀನು ಎಫ್‌ಐಡಿಯಲ್ಲಿ ನೋಂದಣಿ ಆಗಿದೆಯೇ ಎಂದು ಪರಿಶೀಲನೆ ಮಾಡಿಕೊಳ್ಳಬೇಕು. ಈಗಾಗಲೇ ಎಫ್‌ಐಡಿ ಮಾಡಿಸಿರುವವರು ಎಲ್ಲ ಸರ್ವೆ ನಂಬರ್‌ಗಳು ಜೋಡಣೆಯಾಗಿರುವುದನ್ನು ಖಚಿತ ಪಡಿಸಿಕೊಳ್ಳಬೇಕು. ಜಂಟಿ ಖಾತೆದಾರರಾಗಿದ್ದಲ್ಲಿ ಪ್ರತ್ಯೇಕವಾಗಿ ಜಮೀನಿನ ವಿಸ್ತೀರ್ಣವನ್ನು ಸಮಾನವಾಗಿ ಮಾಡಿಕೊಂಡು ಎಫ್‌ಐಡಿ ಮಾಡಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗೆ ಗ್ರಾಮ ಆಢಳಿತಾಧಿಕಾರಿಗಳು, ಸಹಾಯಕ ತೋಟಗಾರಿಕೆ ಕಚೇರಿ ಅಥವಾ ಹೋಬಳಿಯ ರೈತ ಸಂಪರ್ಕ ಕೇಂದ್ರಗಳನ್ನು ಸಂಪರ್ಕಿಸಬಹುದು ಳಿಸಿದ್ದಾರೆ.

# ರವಿ ಕಾಣದ್ದನ್ನು ಕವಿ ಕಂಡ, ಕವಿ ಕಾಣದ್ದನ್ನು ಕಲಾವಿದರು ತೋರಿಸಿ: ಡಿ.ಸಿ. ಡಾ. ವೆಂಕಟೇಶ್

■ **ಜನಾಶಯಪ್ರಭ ದಾವಣಗೆರೆ**



ಸಾಂಕ್ರಾಮಿಕ ಕಾಯಿಲೆಗಳ ಮತ್ತು ಅಸಾಂಕ್ರಾಮಿಕ ರೋಗಗಳ ಕುರಿತು ಆಕರ್ಷಣಿಯವಾಗಿ ಜನರ ಮನ ಮುಟ್ಟುವಂತೆ ಜಾಗೃತಿ ಮೂಡಿಸಬೇಕು. ಈ ಮೂಲಕ ರವಿ ಕಾಣದ್ದನ್ನು ಕವಿ ಕಂಡ, ಕವಿ ಕಾಣದ್ದನ್ನು ಕಲಾವಿದರು ಬೀದಿನಾಟಕ ಪ್ರದರ್ಶನದ ಮೂಲಕ ತೋರಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ್. ಎಂ.ವಿ ತಿಳಿಸಿದರು.

ಹರಿಹರ ತಾಲ್ಲೂಕಿನ ಕೊಂಡಜ್ಜಿಯಲ್ಲಿರುವ ಕೊಂಡಜ್ಜಿ ಬಸಪ್ಪ ಸ್ಕೌಟ್ಸ್ & ಗೈಡ್ಸ್ ತರಬೇತಿ ಕೇಂದ್ರದಲ್ಲಿ ಬುಧವಾರ ನಡೆದ ಬೆಂಗಳೂರು ವಿಭಾಗ ಮಟ್ಟದ ಜಾನಪದ ಕಲಾ ತಂಡಗಳ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಜನರಿಗೆ ಆರೋಗ್ಯದ ಬಗ್ಗೆ ಸರಿಯಾದ ಮಾಹಿತಿ ಇಲ್ಲದೆ ಇರುವುದರಿಂದ ತಾಯಿ ಮತ್ತು ಮಗುವಿನ ಮರಣ ಪದೇ ಪದೇ ಮರುಕಳಿಸುತ್ತಿದೆ. ಆದ್ದರಿಂದ ತಾಯಿ ಕಾರ್ಡ್ ಬಗ್ಗೆ ಸರಿಯಾದ ಜಾಗೃತಿಯನ್ನು ಮೂಡಿಸುವುದು. ಗರ್ಭಿಣಿಯರಿಗೆ ನೀಡುವ ಲಸಿಕೆಯ ಬಗ್ಗೆ ಹಾಗೂ ತಪಾಸಣೆ, 108 ವಾಹನದ ಬಗ್ಗೆ ಆಸ್ಪತ್ರೆಯ ಹರಿಗೆಯ ಬಗ್ಗೆ ಜಾಗೃತಿ ಮೂಡಿಸಬೇಕು. ಇದರಿಂದ ತಾಯಿ ಮರಣ ಮತ್ತು ಮಗುವಿನ ಮರಣವನ್ನು ತಡೆಗಟ್ಟಲು ಮುಖ್ಯವಾದ ಅಸ್ತ್ರವಾಗುತ್ತದೆ ಎಂದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಷಣ್ಮುಖಪ್ಪ ಮಾತನಾಡಿ ರಾಷ್ಟ್ರೀಯ ಕಾರ್ಯಕ್ರಮಗಳ ಅರಿವು ಜನರಿಗಿಲ್ಲದೆ ರಕ್ತಹೀನತೆಯಿಂದ ಬಳಲುತ್ತಿದ್ದಾರೆ. ಆದ್ದರಿಂದ ಅನಿಮೀಯಾ ಮುಕ್ತ ಕರ್ನಾಟಕ, ಸುರಕ್ಷೀತ ಹೆರಿಗೆ, ಜೆ.ಎಸ್. ವೈ., ಅಂಗಾಂಗ ದಾನ, ಈ ವಿಷಯವು ಬೀದಿ ನಾಟಕದಲ್ಲಿ ಅಡಕವಾಗಿರಬೇಕು ಎಂದು ತಿಳಿಸಿದರು.

ಹರಿಹರ ತಾಲ್ಲೂಕು ನೋಡಲ್ ಅಧಿಕಾರಿ ಹಾಗೂ ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಮುರುಳೀಧರ ಮಾತನಾಡಿ ಕ್ಷಯರೋಗವು ಸಾಮಾಜಿಕ ಪೀಡುಗಾಗಿದೆ ಎಂದು ತಿಳಿಸುತ್ತಾ ಕ್ಷಯರೋಗದ ಲಕ್ಷಣ ಹಾಗೂ ನಿಯಂತ್ರಣ ಮಾಡುವ ಬಗ್ಗೆ ಪ್ರದರ್ಶನ ಮಾಡಬೇಕು ಎಂದರು.ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಡಾ.ಸುರೇಶ.ಎನ್.ಬಾರ್ಕಿ ಮಾತನಾಡಿ ರಾಷ್ಟ್ರೀಯ ಕಾರ್ಯಕ್ರಮದ ಅರಿವು ಜನರಲ್ಲಿ ಜಾಗೃತಿ ಮೂಡಿಸಲು ಇದು ಉತ್ತಮವಾದ ತರಬೇತಿಯಾಗಿದೆ. ಈ ತರಬೇತಿ ಪಡೆದು ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿಯೂ ಜಾಗೃತಿ ಮೂಡಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಹೇಳಿದರು.

ಜಿಲ್ಲಾ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳಾದ ಡಾ. ರಾಘವನ್, ಡಾ.ರುದ್ರಸ್ವಾಮಿ, ಡಾ.ಗಂಗಾಧರ್, ಡಾ. ಮಂಜುನಾಥ್ ಪಾಟೀಲ್, ರಾಜ್ಯ ಐ.ಇ.ಸಿ. ಕೋಶದ ಆರೋಗ್ಯಶಿಕ್ಷಣಾಧಿಕಾರಿ ಜ್ಞಾನೇಶ್ವರ್ ಹಾಗೂ ತಾಲ್ಲೂಕು ಆರೋಗ್ಯಾಧಿಕಾರಿಗಳಾದ ಡಾ. ಪ್ರಶಾಂತ ಕುಮಾರ್, ಪ್ರಾಥಮಿಕ ಆರೋಗ್ಯ ಕೇಂದ್ರ ಕೊಂಡಜ್ಜಿ ವೈದ್ಯಾಧಿಕಾರಿ ಡಾ.ಶಶಿಕಲಾ ಹಾಗೂ ತರಬೇತಿದಾರರು ಉಪಸ್ಥಿತರಿದ್ದರು.

# ಉಪನ್ಯಾಸಕರು ಶ್ರದ್ಧೆಯಿಂದ ಬೋಧನೆ ಮಾಡಿದರೆ ಉತ್ತಮ ಫಲಿತಾಂಶ: ಪುಟ್ಟಸ್ವಾಮಿ

» **ಚಿತ್ರದುರ್ಗ**



ಗಣಿತ ವಿಷಯ ಫಲಿತಾಂಶ ಉತ್ತಮವಾದರೆ ವಿಜ್ಞಾನ ಫಲಿತಾಂಶವೇ ಉತ್ತಮವಾಗಿರುತ್ತದೆ ಎಂದು ಪಿ.ಯು.ಉಪನಿರ್ದೇಶಕರಾದ ಪುಟ್ಟಸ್ವಾಮಿ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ನಮ್ಮ ಎಕ್ಸ್ ಪರ್ಟ ಕಾಲೇಜಿನಲ್ಲಿ ಮಂಗಳವಾರ ನಡೆದ ಗಣಿತಶಾಸ್ತ್ರ ವಿಷಯದ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿ, ಬಹಳಷ್ಟು ವಿದ್ಯಾರ್ಥಿಗಳು ಗ್ರಾಮಾಂತರ ಪ್ರದೇಶದಿಂದ ಬಂದಿರುತ್ತಾರೆ.

ಆವರು ಮನೆಯಲ್ಲಿ ಎಲ್ಲಾ ಕೆಲಸಗಳನ್ನು ಮಾಡಿಕೊಂಡು ವಿದ್ಯಾಭ್ಯಾಸ ಮಾಡಬೇಕಾಗಿರುತ್ತದೆ ಆದುದರಿಂದ ಉಪನ್ಯಾಸಕರಾಧ ತಾವುಗಳು ತುಂಬಾ ಶ್ರದ್ದೆಯಿಂದ ಭೋಧನೆ ಮಾಡಿದರೆ ಉತ್ತಮ ಫಲಿತಾಂಶ ಬರುವುದರಲ್ಲಿ ಸಂದೇಹವಿಲ್ಲ, ಈ ಶೈಕ್ಷಣಿಕ ವರ್ಷದಲ್ಲಿ 80 ಅಂಕಗಳು ಪರೀಕ್ಷೆ ಮತ್ತು 20 ಅಂಕಗಳು ಆಂತರಿಕ ಅಂಕಗಳು ಇರುವುದರಿಂದ ವಿದ್ಯಾರ್ಥಿ ಉತ್ತೀರ್ಣರಾಗಲು ಕೇವಲ 24 ಅಂಕಗಳು ಸಾಕು ಈ ನಿಟ್ಟಿನಲ್ಲಿ ನೀವೆಲ್ಲ ಶ್ರಮವಹಿಸಿ ಎಂದು ತಿಳಿಸಿದರು.

ಉಪನ್ಯಾಸಕರ ಸಂಘದ ಅಧ್ಯಕ್ಷರಾದ ಮಲ್ಲೇಶಪ್ಪ ಮಾತನಾಡಿ, ನಮ್ಮ ಉಪ ನಿರ್ದೇಶಕರ ಬದಲಾಗಿ ಜಿಲ್ಲಾ ಪಂಚಾಯತ್ ಸಿಇಓಗೆ ಜವಾಬ್ದಾರಿಯನ್ನು ವಹಿಸಿರುವುದನ್ನು ನಾವು ವಿರೋಧಿಸುತ್ತೇವೆ. ನಾವೆಲ್ಲ ಬಂದಾಗ ಪಿ.ಯು. ಉಪ ನಿರ್ದೇಶಕರು ಅಡಿಯಲ್ಲಿ ಕೆಲಸವನ್ನು ಮಾಡೋಣ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಗಣಿತಶಾಸ್ತ್ರ ವೇದಿಕೆಯ ಅಧ್ಯಕ್ಷರಾದ ಪಿ.ಎಂ.ಜಿ.ರಾಜೇಶ್ ಮಾತನಾಡಿ ಈ ವರ್ಷ ಆಂತರಿಂಕ ಅಂಕಗಳನ್ನು ಇಲಾಖೆ ನೀಡಿರುವುದರಿಂದ ಉತ್ತಮ ಫಲಿತಾಂಶ ನೀಡುತ್ತೇವೆ ಎಂದು ಎಲ್ಲಾ ಉಪನ್ಯಾಸಕರ ಪರವಾಗಿ ತಿಳಿಸಿದರು.

ಈಸಂದರ್ಭದಲ್ಲಿವೇದಿಕೆಯಉಪಾಧ್ಯಕ್ಷರಾದ ವಸಂತ, ಕಾರ್ಯದರ್ಶಿಗಳಾದ ಸುರೇಶ್ ಲೋಕೇಶ್, ಖಂಜಾಚಿಗಳಾದ ಕೃಷ್ಣಮೂರ್ತಿ, ನಮ್ಮ ಎಕ್ಸಫರ್ಟ ಕಾಲೇಜಿನ ಪ್ರಾಂಶುಪಾಲರಾದ ವಾಹಿದ್ ಖಾನ್ ಹಾಗೂ ಸಂಪನ್ಮೂಲ ವ್ಯಕ್ತಿಗಳಾದ ದಾವಣಗೆರೆಯ ಹೇಮರೆಡ್ಡಿ, ಚಿತ್ರದುರ್ಗ ಉಮೇಶ್,ವೀರಣ್ಣನವರು ಆಗಮಿಸಿದ್ದರು. ಕಾಮಾಕ್ಷಿ ಪ್ರಾರ್ಥಿಸಿದರೆ, ವಸಂತ ಸ್ವಾಗತಿಸಿದರು. ಕೆ.ಆರ್.ತಿಪ್ಪೇಸ್ವಾಮಿ ವಂದಿಸಿದರು.

# ಕೆಸರುಕಟ್ಟೆ ಕೆರೆ ಕೋಡಿ ಮೇಲೆ 50 ಚೀಲ ಗೋಧಿ



» **ಹೊಳಲ್ಕೆರೆ**

ಪಟ್ಟಣದ ಅವಳಿಹಟ್ಟಿ ರಸ್ತೆಯಲ್ಲಿ ಕೆಸರುಕಟ್ಟೆ ಕೆರೆ ಕೋಡಿ ನೀರು ಹರಿಯುವ ಹಳ್ಳಕ್ಕೆ ನಿರ್ಮಿಸಿದ ಸೇತುವೆ ಕೆಳಭಾಗದಲ್ಲಿ ಸುಮಾರು 50ಕ್ಕು ಹೆಚ್ಚು ಗೋಧಿ ಚೀಲಗಳನ್ನು ಬೀಸಾಗಿರುವುದು ಕಳೆದ ನಾಲ್ಕೈದು ದಿನಗಳ ಹಿಂದೆ ಪತ್ತೆಯಾಗಿದೆ.

ಗೋಧಿ ತುಂಬಿರುವ ಚೀಲಗಳನ್ನು ಅನಾಮದೆಯಾಗಿ ಕೆರೆ ಕೋಡಿ ನೀರು ಹರಿಯುವ ಸೇತುವೆ ಕೆಳಗೆ ಹಾಕಿದ್ದು ಯರೇಂಬ ಬಗ್ಗೆ ನಿಕರ ಮಾಹಿತಿ ಪತ್ತೆಯಾಗಿಲ್ಲ. ಈ ಬಗ್ಗೆ ಪೊಲೀಸ್ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಆಹಾರ ಇಲಾಖೆಗೆ ಮಾಹಿತಿ ನೀಡಿದ್ದರೂ ಸೂಕ್ತ ತನಿಖೆ ಮಾಡಿ, ಆಹಾರ ಪದಾರ್ಥವಾದ ಗೋಧಿ ಎಲ್ಲಿಂದ ಬಂತು ಎನ್ನುವ ಬಗ್ಗೆ ತನಿಖೆ ಮಾಡಿರುವುದಿಲ್ಲ.

ಗೋದಾಮಿನಲ್ಲಿ ಸಂಗ್ರಹಿಸಿದ್ದ ಗೋಧಿ ಹುಳು ಬಿದ್ದಿವೆ. ಊಟಕ್ಕೆ ಯಾಗ್ಯವಾಗಿಲ್ಲ ಎನ್ನುವ ಕಾರಣದಿಂದಾಗಿ ರಾತ್ರೋರಾತ್ರಿ ಕೆರೆ ಕೋಡಿ ನೀರು ಹರಿಯುವ ಅವಳಿಹಟ್ಟಿ ರಸ್ತೆಯ ಸೇತುವೆ ಕೆಳಗೆ ಎಸೆಯಲಾಗಿದೆ. ಮುಂಜಾನೆ ವಾಕ್ ಮಾಡುವ ಜನರು ಗೋಧಿ ಚೀಲಗಳನ್ನು ನೋಡಿದ್ದು, ತೋಟದ ಮಾಲಿಕ ಮಂಜುನಾಥಗೆ ಮಾಹಿತಿ ನೀಡಿದ್ದಾರೆ. ಗೋಧಿ ಚೀಲಗಳನ್ನು ಪರಿಶೀಲಿಸಿದಾಗ ಸ್ಥಳಿಯರು ಗೋಧಿ ಚೀಲಗಳನ್ನು ಸೇತುವೆ ಕೆಳಗೆ ಹಾಕಿದ್ದಾರೆಂದು ಅನುಮಾನ ಮೂಡಿಸಿದೆ.

ಜತೆ ಗೋಧಿ ಚೀಲಗಳು ನೀರಿನಲ್ಲಿ ಎಸೆದಿರುವ ಮಾಹಿತಿ ಪಟ್ಟಣದಲ್ಲಿಪ್ರಚಾರವಾಗುತ್ತಿದ್ದಂತೆ ರಾತ್ರೋರಾತ್ರಿ ಜೆಸಿಬಿ ಮೂಲಕ ಗೋಧಿ ಚೀಲಗಳನ್ನು ನೀರಿನಲ್ಲಿ ಮುಳುಗಿಸಿ ನಾಶ ಮಾಡಲಾಗಿದೆ ಎಂದು ಸ್ಥಳೀಯ ಜಮೀನು ಮಾಲಿಕ ಮಂಜುನಾಥ ತಿಳಿಸಿದ್ದು, ಹಾಗೂ ತೋಟಕ್ಕೆ ನೀರು ಹರಿಸಲು ಹಾಕಲಾಗಿದ್ದ ಪೈಪ್ ಲೈನ್ ಒಡೆದು ಹಾಕಿದ್ದಾರೆಂದು ಮಂಜುನಾಥ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಹಾಗಾಗಿ ಜಿಲ್ಲಾಢಳಿತಗೋಧಿಯನ್ನುನೀರಿಗೆ ಎಸೆದು ಆಹಾರ ಪದಾರ್ಥಗಳನ್ನು ನಾಶ ಮಾಡಿರುವವರ ವಿರುದ್ಧ ಕಾನೂನು ಕ್ರಮಕ್ಕೆ ಸೂಕ್ತ ತನಿಖೆ ಕೈಗೊಳ್ಳಬೇಕೆಂದು ಸಾರ್ವಜನಿಕರು ಜಿಲ್ಲಾಧಿಕಾರಿಗಳಿಗೆ ಆಗ್ರಹಿಸಿದ್ದಾರೆ.

# ಬಸ್ ಟಯರ್ ಬರಸ್ಟ್ ಯುವತಿಯ ಎಡಗಾಲಿನ ಕಾಲು ಮೂಳೆ ಮುರಿತ

» **ಹೊಸದುರ್ಗ**

ಹೊಸದುರ್ಗ ಡಿಪೋಗೆ ಸೇರಿದ ಕೆ.ಎಸ್.ಆರ್.ಟಿ.ಸಿ ಬಸ್ಸೊಂದು ಚಿತ್ರದುರ್ಗದಿಂದ ಹೊಸದುರ್ಗಕ್ಕೆ ಬರುತಿದ್ದ ಸಂಧರ್ಬದಲ್ಲಿ ಹೊಸದುರ್ಗ ಪಟ್ಟಣಕ್ಕೆ ಸಮೀಪವಿರುವ ಒಂದನೇ ಯಾಲಕ್ಕಪ್ಪನಹಟ್ಟಿ ಬಳಿ ಟಯರ್ ಬರಸ್ಟ್ ಆಗಿದ್ದು ಬಸ್‌ನಲ್ಲಿದ್ದ ನಯನ (25) ಎಂಬ ಯುವತಿಯ ಎಡಗಾಲು ಮೂಳೆ ಮುರಿದಿದ್ದು ಪ್ರಾಣಾಪಾಯದಿಂದ ಪಾರಾಗಿದ್ದಾರೆ.ಬಸ್ ಚಾಲಕ ಅತಿ ವೇಗವಾಗಿ ಚಲಾಯಿಸುತಿದ್ದ ಎಂದು ಹೇಳಲಾಗಿದ್ದು ಗಾಯಾಳು ಯುವತಿ ಹೊಸದುರ್ಗ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತಿದ್ದು ಈ ಬಗ್ಗೆ ಹೊಸದುರ್ಗ ಪೋಲಿಸ್ ಠಾಣೆಯಲ್ಲಿ ಪ್ರ ಕರಣ ದಾಖಲಾಗಿದೆ.



## ಪ್ರಮುಖ ಸುದ್ದಿ

# ಶ್ರೀ ಮಹಾ ಶಿವಶರಣ ಹರಳಯ್ಯ ಪ್ರಶಸ್ತಿ ಪ್ರಧಾನ

» **ಚಿತ್ರದುರ್ಗ**



ಹಿರಿಯೂರು ತಾಲ್ಲೂಕಿನ ಐಮಂಗಲ ಗ್ರಾಮದ ಶ್ರೀ ಮಹಾ ಶಿವಶರಣ ಹರಳಯ್ಯ ಗುರುಪೀಠದವತಿಯಿಂದ ವಿವಿಧ ರೀತಿಯ ಕಾರ್ಯಕ್ರಮಗಳನ್ನು ನ. 28 ಮಂಗಳವಾರ ಬೆಳಿಗ್ಗೆ 11 ಕ್ಕೆ ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ಮಹಾ ಶಿವಶರಣ ಹರಳಯ್ಯ ಗುರುಪೀಠದ ಶ್ರೀ ಬಸವ ಹರಳಯ್ಯ ಸ್ವಾಮೀಜಿ ತಿಳಿಸಿದರು.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 12ನೇ ಶತಮಾನದ ಶರಣರ ಕಲ್ಯಾಣ ಕ್ರಾಂತಿ ವಿಜಯೋತ್ಸವ, ಶ್ರೀ ಮಹಾ ಶಿವಶರಣ ಹರಳಯ್ಯ ಚಲನಚಿತ್ರದ ಟ್ರೈಲರ್ ಬಿಡುಗಡೆ, ಶ್ರೀ ಮಹಾ ಶಿವಶರಣ ಹರಳಯ್ಯ ಪ್ರಶಸ್ತಿ ಪ್ರಧಾನ, ಅಂತರ್‌ಜಾತಿ ವಿವಾಹವಾದ ಆದರ್ಶ ದಂಪತಿಗಳಿಗೆ ಸನ್ಮಾನ, 3 ದಿನಗಳ ನಾಟಕೋತ್ಸವ ಹಾಗೂ ಜೀ.ಕನ್ನಡ ವಾಹಿನಿ ಪುಟಾಣಿಗಳಿಂದ ಸಂಗೀತ ಕಾರ್ಯಕ್ರಮ ನಡೆಯಲಿದೆ.

ಪ್ರತಿ ವರ್ಷದಂತೆ ಈ ವರ್ಷವೂ ಸಹಾ ಮಹಾ ಶಿವಶರಣ ಹರಳಯ್ಯ ಪ್ರಶಸ್ತಿಯನ್ನು ಪ್ರಧಾನ ಮಾಡಲಾಗುವುದು ಈ ಬಾರಿ ಈ ಪ್ರಶಸ್ತಿಗೆ ಬಿ.ಡಿ.ಜತ್ತಿಯವರ ಮಗ ಅರವಿಂದ ಜತ್ತಿಯವರಿಗೆ ನೀಡಲಾಗುತ್ತಿದೆಈಪ್ರಶಸ್ತಿಯೂ25ಸಾವಿರಬಹುಮಾನವನ್ನು ಹೊಂದಿದೆ. ಇದೇ ಸಂದರ್ಭದಲ್ಲಿ ಮಧುವರಸ ಪ್ರಶಸ್ತಿಗೆ ಡಾ.ಗೊ. ಚನ್ನಬಸಪ್ಪರವರು ಆಯ್ಕೆಯಾಗಿದ್ದಾರೆ.

ಕಾರ್ಯಕ್ರಮದ ಧ್ವಜಾರೋಹಣವನ್ನು ಬೇಲಿ ಮಠದ ಶ್ರೀ ಶಿವರುದ್ರ ಶ್ರೀಗಳು, ಮುರುಘಾಮಠದ ಶ್ರೀ ಬಸವಪ್ರಭು ಶ್ರೀಗಳು ನಡೆಸಲಿದ್ದಾರೆ. ಕಾರ್ಯಕ್ರಮದ ಉದ್ಘಾಟನೆಯನ್ನು ಸಾಣೆಹಳ್ಳಿಯ ಶ್ರೀ ಪಂಡಿತಾರಾಧ್ಯ ಶ್ರೀಗಳು, ಮೈಸೂರಿನ ಶಿವಯೋಗಿ ಶ್ರೀ ಉರಿಲಿಂಗಿಸಿದ್ದೇಶ್ವರ ಮಹಾ ಸಂಸ್ಥಾನದ ಶ್ರೀ ಜ್ಞಾನಪ್ರಕಾಶಶ್ರೀಗಳು ನೇರವೇರಿಸಲಿದ್ದಾರೆ. ಶ್ರೀ ಮಹಾಶಿವಶರಣ ಚಲನಚಿತ್ರದ ಟ್ರೈಲರ್‌ನ್ನು ಇಳಕಲ್‌ನ ಗುರು ಮಹಾಂತಪ್ಪ ಶ್ರೀಗಳು, ಪೂನಾದ ರವಿದಾಸ ಮಹಾ ಸಂಸ್ಥಾನದ ಸಂತ ಶ್ರೀ ಸುಖದೇವ ಮಹಾರಾಜ್ ಬಿಡುಗಡೆ ಮಾಡಲಿದ್ದಾರೆ. ಶ್ರೀ ಮಹಾ ಶಿವಶರಣ ಹರಳಯ್ಯ ಪ್ರಶಸ್ತಿಯನ್ನು ಹುಣಸೂರಿನ ವಿರಕ್ತಮಠದ ಮೋಕ್ಷಪತಿ ಮಹಾ ಸ್ವಾಮೀಜಿ ಚನ್ನಗಿರಿಯ ಪಾಂಡೋಮಟ್ಟಿಯ ಗುರುಬಸವ ಶ್ರೀಗಳು ಪ್ರಧಾನ ಮಾಡಲಿದ್ದಾರೆ. ಅಂತರ್ ಜಾತಿ ವಿವಾಹ ಮತ್ತು ಆದರ್ಶ ದಂಪತಿಗಳಿಗೆ ಸನ್ಮಾನವನ್ನು ಅಥಣಿಯ ಶಿವಬಸವ ಶ್ರೀಗಳು ಮತ್ತು ಮೈಸೂರಿನ ಚಿದರಹಳ್ಳಿಯ ಮಲ್ಲಿಕಾರ್ಜನ ಶ್ರೀಗಳು ನಡೆಸಿ ಕೊಡಲಿದ್ದಾರೆ. ಮಕ್ಕಳಿಗೆ ಪ್ರತಿಭಾ ಪುರಸ್ಕಾರವನ್ನು ಚಿದರಹಳ್ಳಿಯ ಮರಳು ಶಂಕರ ಮಠದ ಸಿದ್ದಬಸವ ಶ್ರೀಗಳು ಮತ್ತು ನೆಲಮಂಗಲದ ಡಾ.ಬಸವ ರಮಾನಂದ ಶ್ರೀಗಳು ನಡೆಸಲಿದ್ದಾರೆ ಎಂದರು.

ಈ ಕಾರ್ಯಕ್ರಮದಲ್ಲಿ ಸಚಿವರುಗಳಾದ ಕೆ.ಹೆಚ್.ಮುನಿಯಪ್ಪ, ಡಿ.ಸುಧಾಕರ್, ಡಾ.ಹೆಚ್.ಸಿ.ಮಹದೇವಪ್ಪ, ಸತೀಶ್ ಜಾರಕಿಹೊಳಿ, ಪ್ರಯಾಂಕ ಖರ್ಗೆ, ಶರಣು ಪ್ರಕಾಶ್ ಪಾಟೀಲ್, ಆರ್.ಬಿ.ತಿಮ್ಮಾಪುರ್ ಮಾಜಿ ಎಂ.ಎಲ್.ಸಿ. ಹನುಮಂತಯ್ಯ, ಧರ್ಮಸೇನ, ಶಾಸಕರುಗಳಾದ ಕೆ.ಸಿ.ವಿರೇಂದ್ರ, ಎನ್ ವೈ.ಗೋಪಾಲಕೃಷ್ಣ, ಬಿ.ಜಿ.ಗೋವಿಂದಪ್ಪ, ಡಾ.ಎಂ.ಚಂದ್ರಪ್ಪ, ರಘುಮೂರ್ತಿ ಮಾಜಿ ಸಂಸದ ಜನಾರ್ಧನಸ್ವಾಮಿ, ಡಾ.ಗೋ.ಚನ್ನಬಸಪ್ಪ, ನಾಗಮೋಹನ ದಾಸ್, ರವಿಂದ್ರಭಟ್ಟ, ಬಂಜಗರೆ ಜಯಪ್ರಕಾಶ್, ಮಲ್ಲಿಕಾ ಗಂಟಿ, ಗುರುಮೂರ್ತಿ, ಎನ್.ಮೂರ್ತಿ, ಸೇರಿದಂತೆ ಇತರರು ಭಾಗವಹಿಸಲಿದ್ದಾರೆ ಎಂದು ಶ್ರೀ ಮಹಾ ಶಿವಶರಣ ಹರಳಯ್ಯ ಗುರುಪೀಠದ ಶ್ರೀ ಬಸವ ಹರಳಯ್ಯ ಸ್ವಾಮೀಜಿ ತಿಳಿಸಿದರು. ಗೋಷ್ಠಿಯಲ್ಲಿ ಡಿಎಸ್.ಎಸ್.ಜಿಲ್ಲಾಧ್ಯಕ್ಷರಾದ ಸಿ.ಹೆಚ್. ಮಂಜುನಾಥ್, ತಾಲ್ಲೂಕು ಅಧ್ಯಕ್ಷ ವೀರಭದ್ರಪ್ಪ, ಗ್ರಾ.ಪಂ.ಸದಸ್ಯರಾದ ಕಣಮಪ್ಪ ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T